**2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 12**

# ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018

## ಪ್ರಕರಣಗಳ ಪಟ್ಟಿ

**ಪ್ರಕರಣಗಳು**

### ಅಧ್ಯಾಯ–I
### ಪ್ರಾಥಮಿಕ


1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ
2. ಪರಿಭಾಷೆಗಳು


### ಅಧ್ಯಾಯ–II
### ಪ್ರಾಧಿಕಾರ ಮತ್ತು ಅದರ ಸಿಬ್ಬಂದಿ


3. ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ
4. ಪ್ರಾಧಿಕಾರದ ಸರ್ಕಾರೇತರ ಸದಸ್ಯರ ಪದಾವಧಿ ಮತ್ತು ಸೇವಾ ಷರತ್ತುಗಳು.
5. ಸದಸ್ಯನ ಪದಕ್ಕೆ ಅನರ್ಹತೆಗಳು.
6. ಸರ್ಕಾರೇತರ ಸದಸ್ಯನನ್ನು ತೆಗೆದು ಹಾಕುವುದು.
7. ಮರು ನೇಮಕಾತಿಗೆ ಅರ್ಹತೆ.
8. ಪ್ರಾಧಿಕಾರದ ಅಧಿಕಾರಗಳು
9. ಪ್ರಾಧಿಕಾರದ ಉಪ ಸಮಿತಿಗಳು
10. ಆಯುಕ್ತನ ನೇಮಕಾತಿ
11. ಆಯುಕ್ತನ ಅಧಿಕಾರಗಳು ಮತ್ತು ಕರ್ತವ್ಯಗಳು
12. ಪ್ರಾಧಿಕಾರದ ನೌಕರರು
13. ಪ್ರಾಧಿಕಾರದ ಅಡಿಯಲ್ಲಿನ ಸೇವೆಗಳಿಗಾಗಿ ಸಾಮಾನ್ಯ ಅನರ್ಹತೆಗಳು.
14. ಪ್ರಾಧಿಕಾರದ ಸಭೆಗಳು
15. ವ್ಯವಹರಣೆಗಳು ಸರಿಯಾದುದೆಂದು ಮತ್ತು ಊರ್ಜಿತವಾದುದೆಂದು ಪೂರ್ವಭಾವನೆ ಮಾಡುವುದು.
16. ಟಿಪ್ಪಣಿಯ ಪರಿಚಲನೆಯ ಮೂಲಕ ಪ್ರಾಧಿಕಾರದ ತೀರ್ಮಾನಗಳು
17. ಕೆಲವು ತೀರ್ಮಾನಗಳನ್ನು ಕೈಗೊಳ್ಳಲು ಅಧ್ಯಕ್ಷನ ಅಧಿಕಾರ


### ಅಧ್ಯಾಯ– III
### ಪಾರಂಪರಿಕ ತಾಣಗಳ ಅಭಿವೃದ್ಧಿ ಮತ್ತು ನಿರ್ವಹಣೆ


18. ಪಾರಂಪರಿಕ ತಾಣಗಳು
19. ಅನುಸೂಚಿಯನ್ನು ತಿದ್ದುಪಡಿ ಮಾಡುವ ಅಧಿಕಾರ
20. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು.
21. ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ನಿರ್ವಹಣೆ
22. ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರದ ಅಧಿಕಾರಗಳ ಪ್ರತ್ಯಾಯೋಜನೆ
23. ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ನ್ನು ಪ್ರಾಧಿಕಾರದ ಆವರಣಗಳಿಗೆ ಅನ್ವಯಿಸುವುದು
24. ಪ್ರವಾಸೋದ್ಯಮಕ್ಕೆ ಮತ್ತು ಯಾತ್ರೆ ಕೈಗೊಳ್ಳುವುದಕ್ಕೆ ಪ್ರಾಧಿಕಾರವು ಉತ್ತೇಜಿಸುವುದು
25. ಅಧಿಕಾರಗಳ ಪ್ರತ್ಯಾಯೋಜನೆ


### ಅಧ್ಯಾಯ – IV

ಹಣಕಾಸು ಮತ್ತು ಸ್ವತ್ತು

26. ಪ್ರಾಧಿಕಾರದ ನಿಧಿಗಳು
27. ನಿಧಿಯ ಬಳಕೆ
28. ಸರ್ಕಾರದಿಂದ ಅನುದಾನ
29. ಪ್ರಾಧಿಕಾರದ ಆಯವ್ಯಯ
30. ಲೆಕ್ಕ ಪತ್ರಗಳು ಮತ್ತು ಲೆಕ್ಕಪರಿಶೋಧನೆ
31. ವರದಿಗಳು

ಅಧ್ಯಾಯ V
ಸಂಕೀರ್ಣ

32. ಪ್ರಾಧಿಕಾರವು ಅದರ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಭೂಮಿಯನ್ನು ಮಾರಾಟ ಮಾಡಕೂಡದು
33. ಕೆಲವು ವ್ಯಕ್ತಿಗಳು ಲೋಕನೌಕರರಾಗಿರತಕ್ಕದ್ದು
34. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ
35. ಕರ್ತವ್ಯ ನಿರ್ವಹಣೆಯಲ್ಲಿ ಲೋಪ
36. ಪ್ರಾಧಿಕಾರದ ವಿಘಟನೆ
37. ರಾಜ್ಯ ಸರ್ಕಾರದ ನಿಯಂತ್ರಣ.
38. ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರ
39. ತೊಂದರೆಗಳ ನಿವಾರಣೆ
40. ನಿಯಮಗಳ ರಚನಾಧಿಕಾರ
41. ವಿನಿಯಮಗಳ ರಚನಾಧಿಕಾರ
ಅನುಸೂಚಿ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

I

**2018ರ ಅಧಿನಿಯಮ ಸಂಖ್ಯೆ 12.–** ಶ್ರೀ ನಾಡಪ್ರಭು ಕೆಂಪೇಗೌಡರು ಬೆಂಗಳೂರು ನಗರದ ಹಾಗೂ ಹಲವು ಇತರ ಪಾರಂಪರಿಕ ತಾಣಗಳು ಮತ್ತು ಸ್ಮಾರಕಗಳ ಸ್ಥಾಪಕರು ಮತ್ತು ಅಭಿವೃದ್ಧಿಕಾರರಾಗಿದ್ದಾರೆ. ಆದುದರಿಂದ, ಬೆಂಗಳೂರು ಕಂದಾಯ ವಿಭಾಗದಲ್ಲಿ ಬರುವ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ರಾಮನಗರ ಮತ್ತು ತುಮಕೂರು ಜಿಲ್ಲೆಗಳಲ್ಲಿ ಮತ್ತು ಅವುಗಳ ಸುತ್ತಮುತ್ತಲಲ್ಲಿ ನಾಡಪ್ರಭು ಕೆಂಪೇಗೌಡರ ಪಾರಂಪರಿಕ ತಾಣಗಳು, ಪ್ರವಾಸಿ ಸ್ಥಳಗಳು ಮತ್ತು ಸ್ಮಾರಕಗಳನ್ನು ಅಂತರ ರಾಷ್ಟ್ರೀಯ ಸಾಂಸ್ಕೃತಿಕ ಮತ್ತು ಪ್ರವಾಸೀ ಕೇಂದ್ರವನ್ನಾಗಿ ಮಾಡಿ ಅವುಗಳ ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಒಂದು ಪ್ರಾಧಿಕಾರವನ್ನು ಸ್ಥಾಪಿಸುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2018ರ ವಿಧಾನಸಭೆಯ ವಿಧೇಯಕ ಸಂಖ್ಯೆ 63, ಕಡತ ಸಂಖ್ಯೆ:ಸಂವ್ಯಶಾಇ 51 ಶಾಸನ 2017)
(ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 32 ಮತ್ತು 3ನೇ ಪಟ್ಟಿಯ 40ನೆಯ ನಮೂದನೆಯಡಿಯಲ್ಲಿ ಬರುತ್ತದೆ.)

**II**

**2025ರ ಅಧಿನಿಯಮ ಸಂಖ್ಯೆ: 55** ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯ ಮಂತ್ರಿಯವರು ಆಯ್ಕೆ ಮಾಡಿದ ಯಾವುದೇ ಇತರ ಮಂತ್ರಿಯವರು ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗುವ ಕುರಿತಾದ ಉಪಬಂಧವನ್ನು ಪರಿಷ್ಕರಿಸಲು, ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 12)ನ್ನು, ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

[2025ರ ವಿಧಾನ ಸಭೆಯ ವಿಧೇಯಕ ಸಂಖ್ಯೆ: 37, ಕಡತ ಸಂಖ್ಯೆ:ಸಂವ್ಯಶಾಇ 41 ಶಾಸನ 2025]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 32ನೇ ನಮೂದನೆಯಡಿ ಬರುತ್ತದೆ.]
[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:563, ದಿನಾಂಕ:10.09.2025 ರಲ್ಲಿ ಪ್ರಕಟಗೊಂಡಿದೆ]

**III**

**2026ರ ತಿದ್ದುಪಡಿ ಅಧಿನಿಯಮ ಸಂಖ್ಯೆ: 04** ನಿರ್ದೇಶಕರು, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಇಲಾಖೆ ಮತ್ತು ಮುಖ್ಯ ನಗರ ಯೋಜಕರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಇವರನ್ನು ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರನ್ನಾಗಿ ಸೇರಿಸಲು, ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ 12)ನ್ನು, ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

[2025ರ ವಿಧಾನ ಸಭೆಯ ವಿಧೇಯಕ ಸಂಖ್ಯೆ: 85, ಕಡತ ಸಂಖ್ಯೆ:ಸಂವ್ಯಶಾಇ 99 ಶಾಸನ 2025]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 32 ಮತ್ತು 3ನೇ ಪಟ್ಟಿಯ 40ನೇ ನಮೂದನೆಯಡಿ ಬರುತ್ತದೆ.]
[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:14, ದಿನಾಂಕ:07.01.2026ರಲ್ಲಿ ಪ್ರಕಟಗೊಂಡಿದೆ]

**2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 12**

(2018ರ ಮಾರ್ಚ್ ತಿಂಗಳ ಹದಿನೇಳನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

# ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018

(2018ರ ಮಾರ್ಚ್ ತಿಂಗಳ ಹನ್ನೆರಡನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

(2025ರ ಅಧಿನಿಯಮ ಸಂಖ್ಯೆ:55 ಮತ್ತು 2026ರ 04ರ ಮೂಲಕ ತಿದ್ದುಪಡಿಯಾದಂತೆ)

ಬೆಂಗಳೂರಿನ ಅಭಿವೃದ್ಧಿಗಾಗಿ ನಾಡಪ್ರಭು ಕೆಂಪೇಗೌಡ ಶ್ರಮವನ್ನು ಪರಿಗಣಿಸಿ, ಕೆಂಪೇಗೌಡ ಪಾರಂಪರಿಕ ತಾಣಗಳು, ಪ್ರವಾಸೋದ್ಯಮ ಸ್ಥಳಗಳು ಮತ್ತು ಸ್ಮಾರಕಗಳನ್ನು ಸಂರಕ್ಷಿಸಲು ಮತ್ತು ಅಭಿವೃದ್ಧಿಪಡಿಸಲು ಹಾಗೂ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಒಂದು ಪ್ರಾಧಿಕಾರವನ್ನು ಸ್ಥಾಪಿಸಲು ಉಪಬಂಧ ಕಲ್ಪಿಸುವುದಕ್ಕಾಗಿ ಒಂದು ಅಧಿನಿಯಮ.

ಬೆಂಗಳೂರು ನಗರದಲ್ಲಿ ಮತ್ತು ಸುತ್ತಮುತ್ತಲಲ್ಲಿ ಬೆಂಗಳೂರು ಕಂದಾಯ ವಿಭಾಗದ ಗ್ರಾಮಾಂತರ, ಚಿಕ್ಕಬಳ್ಳಾಪುರ, ರಾಮನಗರ ಮತ್ತು ತುಮಕೂರು ಜಿಲ್ಲೆಗಳಲ್ಲಿನ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣಗಳು, ಪ್ರವಾಸೋದ್ಯಮ ಸ್ಥಳಗಳು ಮತ್ತು ಸ್ಮಾರಕಗಳನ್ನು ಅಂತರ ರಾಷ್ಟ್ರೀಯ ಪಾರಂಪರಿಕ, ಸಾಂಸ್ಕೃತಿಕ ಮತ್ತು ಪ್ರವಾಸೀ ಕೇಂದ್ರವಾಗಿ ಅಭಿವೃದ್ಧಿಪಡಿಸಲು ಮತ್ತು ನಿರ್ವಹಿಸಲು ಒಂದು ಪ್ರಾಧಿಕಾರವನ್ನು ಸ್ಥಾಪಿಸುವುದಕ್ಕಾಗಿ ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ,–

## ಅಧ್ಯಾಯ–I
## ಪ್ರಾಥಮಿಕ

**1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 ಎಂದು ಕರೆಯತಕ್ಕದ್ದು.

(2) ಇದು, 2ನೇ ಪ್ರಕರಣದ (ಎಚ್) ಖಂಡದಲ್ಲಿ ಪರಿಭಾಷಿಸಲಾದಂತೆ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣಗಳಿಗೆ ವ್ಯಾಪ್ತವಾಗತಕ್ಕದ್ದು.

(3) ಇದು, ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಸರ್ಕಾರಿ ರಾಜ್ಯಪತ್ರದಲ್ಲಿ ಗೊತ್ತುಪಡಿಸಬಹುದಾದ ಅಂಥ [1][ದಿನಾಂಕದಿಂದ][1] ಜಾರಿಗೆ ಬರತಕ್ಕದ್ದು.

1. ಈ ಅಧಿನಿಯಮವು ಅಧಿಸೂಚನೆ ಸಂಖ್ಯೆ: ಕಂಇ 31 ಆರ್‌ಇಹೆಚ್ 2016 ದಿ: 26.06.2018ರ ಮೂಲಕ ದಿ: 27.06.2018ರಿಂದ ಜಾರಿಗೆ ಬಂದಿದೆ

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) **"ಸೌಕರ್ಯ"** ಎಂಬುದರಲ್ಲಿ ರಸ್ತೆಗಳು, ಬೀದಿಗಳು, ಸುರಂಗ ಮಾರ್ಗಗಳು, ದೀಪದ ವ್ಯವಸ್ಥೆ, ಚರಂಡಿ ವ್ಯವಸ್ಥೆ, ನೈರ್ಮಲೀಕರಣ, ವಿದ್ಯುಚ್ಛಕ್ತಿ ಮತ್ತು ನೀರು ಸರಬರಾಜು ಅಥವಾ ಇತರ ಅನುಕೂಲತೆಗಳು, ಲೋಕೋಪಯೋಗಿ ಕಾಮಗಾರಿಗಳು, ಮಾರುಕಟ್ಟೆ ಸ್ಥಳಗಳು, ಆಸ್ಪತ್ರೆಗಳು, ಚಿಕಿತ್ಸಾಲಯಗಳು, ಗ್ರಂಥಾಲಯಗಳು, ಮನರಂಜನಾ ಕೇಂದ್ರಗಳು, ಪ್ರಾಧಿಕಾರವು ಅಧಿಕೃತಗೊಳಿಸಿದ ಯಾವುದೇ ಸಾರ್ವಜನಿಕ ಉಪಯುಕ್ತ ಸೇವೆಯ ಸೇವಾ ಕೇಂದ್ರಗಳು ಅಥವಾ ಇತರ ಸೌಲಭ್ಯ ಮತ್ತು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಇತರ ಸೌಕರ್ಯಗಳನ್ನು ಒಳಗೊಳ್ಳುತ್ತದೆ;

(ಬಿ) **"ಪ್ರಾಧಿಕಾರ"** ಎಂದರೆ, 3ನೇ ಪ್ರಕರಣದ ಅಡಿಯಲ್ಲಿ ರಚಿಸಿದ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ;

(ಸಿ) "ಅಧ್ಯಕ್ಷ" ಎಂದರೆ, ಪ್ರಾಧಿಕಾರದ ಅಧ್ಯಕ್ಷ;

(ಡಿ) "ಆಯುಕ್ತ" ಎಂದರೆ, 10ನೇ ಪ್ರಕರಣದ ಅಡಿಯಲ್ಲಿ ನೇಮಕ ಮಾಡಿದ ಪ್ರಾಧಿಕಾರದ ಆಯುಕ್ತ;

(ಇ) "ನಿಧಿ" ಎಂದರೆ, ಪ್ರಾಧಿಕಾರದ ನಿಧಿ;

(ಎಫ್) **"ಪಾರಂಪರಿಕ ತಾಣಗಳು"** ಎಂದರೆ, ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಹಾಗೂ ಅವಶೇಷಗಳ ಅಧಿನಿಯಮ, 1958ರ (1958ರ ಕೇಂದ್ರ ಅಧಿನಿಯಮ ಸಂಖ್ಯೆ 24) ಅಡಿಯಲ್ಲಿ ಸಂರಕ್ಷಿತ ಪ್ರದೇಶವೆಂದು ಉಲ್ಲೇಖಿಸಲಾದ ಪ್ರದೇಶವನ್ನು ಹೊರತುಪಡಿಸಿ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ತಾಣಗಳನ್ನು ಒಳಗೊಳ್ಳುವ ಸಂಪೂರ್ಣ ಪ್ರದೇಶವಾಗಿದೆ;

(ಜಿ) "ಸದಸ್ಯ" ಎಂದರೆ, ಪ್ರಾಧಿಕಾರದ ಸದಸ್ಯ;

(ಎಚ್) 'ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣ' ಎಂದರೆ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ ಮತ್ತು ತುಮಕೂರು ಜಿಲ್ಲೆಯ ಮಿತಿಗಳೊಳಗೆ ಇರುವ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣಗಳು, ಪ್ರವಾಸೋದ್ಯಮ ಸ್ಥಳಗಳು, ಸ್ಮಾರಕಗಳ ಮಿತಿಗಳು ಹಾಗೂ ಬೆಂಗಳೂರಿನಲ್ಲಿ ಪಾರಂಪರಿಕ ತಾಣಗಳ ಅಭಿವೃದ್ಧಿಗಾಗಿ ಸರ್ಕಾರವು ಕಾಲಕಾಲಕ್ಕೆ ಆರ್ಜಿಸಿದ ಭೂಮಿ ಮತ್ತು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಘೋಷಿಸಲಾದ ಅಂಥ ಇತರ ಪ್ರದೇಶವನ್ನು ಒಳಗೊಳ್ಳುತ್ತದೆ;

(ಐ) "ವಿನಿಯಮಗಳು" ಎಂದರೆ, 41ನೇ ಪ್ರಕರಣದ ಮೇರೆಗೆ ರಚಿಸಿದ ಪ್ರಾಧಿಕಾರದ ವಿನಿಯಮಗಳು;

(ಜೆ) "ಅನುಸೂಚಿ" ಎಂದರೆ, ಈ ಅಧಿನಿಯಮಕ್ಕೆ ಲಗತ್ತಿಸಿದ ಅನುಸೂಚಿ.

(ಕೆ) "ಉಪಾಧ್ಯಕ್ಷ" ಎಂದರೆ, ಪ್ರಾಧಿಕಾರದ ಉಪಾಧ್ಯಕ್ಷ.

## ಅಧ್ಯಾಯ–II

## ಪ್ರಾಧಿಕಾರ ಮತ್ತು ಅದರ ಸಿಬ್ಬಂದಿ

3. **ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ.–** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗಾಗಿ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು.

(2) ಪ್ರಾಧಿಕಾರವು ಬೆಂಗಳೂರಿನಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಮತ್ತು ವಿಲೆ ಮಾಡುವ ಹಾಗೂ ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು

(4) ಪ್ರಾಧಿಕಾರವು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:–

[1][(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು;][1]

(ಬಿ) ರಾಮನಗರದ ಉಸ್ತುವಾರಿ ಪ್ರಭಾರದಲ್ಲಿರುವ ಸಚಿವರು– ಉಪಾಧ್ಯಕ್ಷರು;

(ಸಿ) ಕಂದಾಯ ಮಂತ್ರಿಗಳು – ಪದನಿಮಿತ್ತ ಸದಸ್ಯರು;

(ಡಿ) ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು – ಪದನಿಮಿತ್ತ ಸದಸ್ಯರು;

(ಇ) ಬೆಂಗಳೂರು ಗ್ರಾಮಾಂತರ ಲೋಕಸಭಾ ಚುನಾವಣಾ ಕ್ಷೇತ್ರದ ಸಂಸತ್ ಸದಸ್ಯರು, ಬೆಂಗಳೂರು ನಗರವನ್ನು ಪ್ರತಿನಿಧಿಸುವ ಒಬ್ಬರು ರಾಜ್ಯಸಭಾ ಸದಸ್ಯರು ಮತ್ತು ಯಲಹಂಕ ಹಾಗೂ ಮಾಗಡಿ ಚುನಾವಣಾ ಕ್ಷೇತ್ರಗಳ ರಾಜ್ಯ ವಿಧಾನ ಸಭೆ ಸದಸ್ಯರು – ಪದನಿಮಿತ್ತ ಸದಸ್ಯರು;

(ಎಫ್) ಮೇಯರ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ – ಪದನಿಮಿತ್ತ ಸದಸ್ಯರು;

(ಜಿ) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಕಂದಾಯ ಇಲಾಖೆ – ಪದನಿಮಿತ್ತ ಸದಸ್ಯರು;

(ಎಚ್) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಆರ್ಥಿಕ ಇಲಾಖೆ – ಪದನಿಮಿತ್ತ ಸದಸ್ಯರು;

(ಐ) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಥವಾ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ – ಪದನಿಮಿತ್ತ ಸದಸ್ಯರು;

(ಜೆ) ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ – ಪದನಿಮಿತ್ತ ಸದಸ್ಯರು;

[2][(ಜೆ-1) ನಿರ್ದೇಶಕರು, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಇಲಾಖೆ- ಪದನಿಮಿತ್ತ ಸದಸ್ಯರು;

(ಜೆ-2) ಮುಖ್ಯ ನಗರ ಯೋಜಕರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ- ಪದನಿಮಿತ್ತ ಸದಸ್ಯರು.][2]

(ಕೆ) ಪ್ರಾಧಿಕಾರದ ಆಯುಕ್ತರು – ಸದಸ್ಯ ಕಾರ್ಯದರ್ಶಿ;

(ಎಲ್) ನಾಡಪ್ರಭು ಕೆಂಪೇಗೌಡ ಇತಿಹಾಸ ಮತ್ತು ಪರಂಪರೆಯಲ್ಲಿ ತಜ್ಞರಾಗಿರುವ ರಾಜ್ಯ ಸರ್ಕಾರವು ನಾಮನಿರ್ದೇಶಿಸಬೇಕಾದ ಆರು ಸರ್ಕಾರೇತರ ಸದಸ್ಯರು – ಸರ್ಕಾರೇತರ ಸದಸ್ಯರು.

1. 2025 ರ ಅಧಿನಿಯಮ ಸಂಖ್ಯೆ:55ರ ಮೂಲಕ ದಿ:10.09.2025 ರಿಂದ ಜಾರಿಗೆ ಬರುವಂತೆ ಪ್ರತಿಯೋಜಿಸಲಾಗಿದೆ.
2. 2026 ರ ಅಧಿನಿಯಮ ಸಂಖ್ಯೆ:04ರ ಮೂಲಕ ದಿ:07.01.2026 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

**4. ಪ್ರಾಧಿಕಾರದ ಸರ್ಕಾರೇತರ ಸದಸ್ಯರ ಪದಾವಧಿ ಮತ್ತು ಸೇವಾ ಷರತ್ತುಗಳು.**- (1) ರಾಜ್ಯ ಸರ್ಕಾರದ ಇಚ್ಛೆಗೊಳಪಟ್ಟು, ರಾಜ್ಯ ಸರ್ಕಾರವು ನಾಮನಿರ್ದೇಶಿಸಿದ ಸರ್ಕಾರೇತರ ಸದಸ್ಯರು ಮೂರು ವರ್ಷಗಳ ಅವಧಿಗೆ ಪದಧಾರಣ ಮಾಡತಕ್ಕದ್ದು.

(2) ಯಾವೊಬ್ಬ ಸರ್ಕಾರೇತರ ಸದಸ್ಯನು ತನ್ನ ಸಹಿಯೊಂದಿಗೆ ರಾಜ್ಯ ಸರ್ಕಾರಕ್ಕೆ ಬರೆಯುವ ಮೂಲಕ ತನ್ನ ಪದಕ್ಕೆ ರಾಜೀನಾಮೆ ನೀಡಬಹುದು. ಆದರೆ ಅವನ ರಾಜೀನಾಮೆಯು ಅಂಗೀಕಾರವಾಗುವವರೆಗೂ ಪದದಲ್ಲಿ ಮುಂದುವರೆಯತಕ್ಕದ್ದು.

(3) ನಿಯಮಿಸಬಹುದಾದ ಅಂಥ ಭತ್ಯಗಳನ್ನು ಸರ್ಕಾರೇತರ ಸದಸ್ಯರು ಪಡೆಯತಕ್ಕದ್ದು.

**5. ಸದಸ್ಯನ ಪದಕ್ಕೆ ಅನರ್ಹತೆಗಳು.**- ಸರ್ಕಾರೇತರ ಸದಸ್ಯರು,-

(ಎ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧಿ ಎಂದು ನಿರ್ಣೀತನಾಗಿದ್ದು ಕಾರಾವಾಸದ ಶಿಕ್ಷೆಗೆ ಗುರಿಯಾಗಿದ್ದರೆ; ಅಥವಾ

(ಬಿ) ಅಸ್ವಸ್ಥ ಚಿತ್ತದವನಾಗಿದ್ದರೆ ಮತ್ತು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿತನಾಗಿದ್ದರೆ; ಅಥವಾ

(ಸಿ) ಅವಿಮುಕ್ತ ದಿವಾಳಿಯಾಗಿದ್ದರೆ; ಅಥವಾ

(ಡಿ) ಕೇಂದ್ರ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ಒಂದು ಸಂಸ್ಥೆ ಅಥವಾ ನಿಗಮದ ಸೇವೆಯಿಂದ ತೆಗೆದು ಹಾಕಿದವನಾಗಿದ್ದರೆ ಅಥವಾ ವಜಾ ಮಾಡಿದವನಾಗಿದ್ದರೆ; ಅಥವಾ

(ಇ) ಪ್ರಾಧಿಕಾರದ ಆದೇಶದಿಂದ ಮಾಡಲಾದ ಯಾವುದೇ ಕಾರ್ಯದಲ್ಲಿ ಅಥವಾ ಪ್ರಾಧಿಕಾರದೊಡನೆ ಅಥವಾ ಅದರ ಅಡಿಯಲ್ಲಿ ಅಥವಾ ಅದರ ಮೂಲಕ ಅಥವಾ ಅದರ ಪರವಾದ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಸ್ವತಃ ಅವನು ಅಥವಾ ಪಾಲುದಾರನಾಗಿ ಅಥವಾ ಏಜೆಂಟನಾಗಿ ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಯಾವುದೇ ಷೇರನ್ನು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ; ಅಥವಾ

(ಎಫ್) ಪ್ರಾಧಿಕಾರದ ಪರವಾಗಿ ವೇತನ ಪಡೆಯುವ ನ್ಯಾಯವಾದಿಯಾಗಿ ನಿಯೋಜಿತನಾಗಿದ್ದರೆ ಅಥವಾ ಪ್ರಾಧಿಕಾರದ ವಿರುದ್ಧವಾಗಿ ನ್ಯಾಯವಾದಿಯಾಗಿ ನಿಯೋಜನೆಯನ್ನು ಒಪ್ಪಿಕೊಂಡಿದ್ದರೆ,

- ಅವರು ಸದಸ್ಯರಾಗಿ ನೇಮಕ ಹೊಂದಲು ಅಥವಾ ಸದಸ್ಯರಾಗಿರಲು ಅನರ್ಹನಾರಾಗಿರತಕ್ಕದ್ದು:

ಪರಂತು, ಒಬ್ಬ ವ್ಯಕ್ತಿಯು, ಪ್ರಾಧಿಕಾರದ ವ್ಯವಹಾರಗಳಿಗೆ ಸಂಬಂಧಪಟ್ಟಂತೆ ಯಾವುದೇ ಜಾಹೀರಾತನ್ನು ಸೇರಿಸಲಾದ ಯಾವುದೇ ವೃತ್ತ ಪತ್ರಿಕೆಯಲ್ಲಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂಬ ಕಾರಣ ಮಾತ್ರದಿಂದಲೇ (ಇ) ಖಂಡದ ಅಡಿಯಲ್ಲಿ ಅನರ್ಹನಾಗತಕ್ಕದ್ದಲ್ಲ ಅಥವಾ ಸದರಿ ಖಂಡದ ಅರ್ಥವ್ಯಾಪ್ತಿಯಲ್ಲಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಯಾವುದೇ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂದು ಭಾವಿಸತಕ್ಕದ್ದಲ್ಲ.

**6. ಸರ್ಕಾರೇತರ ಸದಸ್ಯನನ್ನು ತೆಗೆದು ಹಾಕುವುದು.**- ರಾಜ್ಯ ಸರ್ಕಾರವು ಸರ್ಕಾರೇತರ ಸದಸ್ಯನನ್ನು,-

(ಎ) ಆತನು 5ನೇ ಪ್ರಕರಣದಲ್ಲಿ ಹೇಳಲಾದ ಅನರ್ಹತೆಗಳಲ್ಲಿ ಯಾವುದೇ ಅನರ್ಹತೆಗೆ ಒಳಪಟ್ಟರೆ:

ಪರಂತು, ಯಾವೊಬ್ಬ ಸದಸ್ಯನನ್ನು, ಆತನು 5ನೇ ಪ್ರಕರಣದ (ಇ) ಖಂಡದಲ್ಲಿ ಹೇಳಲಾದ ಅನರ್ಹತೆಗೆ ಒಳಗಾಗಿದ್ದಾನೆಂಬ ಕಾರಣದ ಮೇಲೆ, ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಅವನಿಗೆ ಒಂದು ಅವಕಾಶವನ್ನು ಕೊಟ್ಟ ಹೊರತು, ತೆಗೆದು ಹಾಕತಕ್ಕದ್ದಲ್ಲ; ಅಥವಾ

(ಬಿ) ಅವನು ಕಾರ್ಯ ನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯವನ್ನು ನಿರ್ವಹಿಸಲು ಅಸಮರ್ಥನಾದರೆ; ಅಥವಾ

(ಸಿ) ಅವನು ಗೈರು ಹಾಜರಾಗಲು ಪ್ರಾಧಿಕಾರದಿಂದ ಅನುಮತಿ ಪಡೆಯದೆ ಪ್ರಾಧಿಕಾರದ ಮೂರು ನಿರಂತರ ಸಭೆಗಳಿಗೆ ಗೈರುಹಾಜರಾದರೆ:

ಪರಂತು, ಈ ಖಂಡವು ಪದನಿಮಿತ್ತ ಸದಸ್ಯರಿಗೆ ಅನ್ವಯವಾಗತಕ್ಕದ್ದಲ್ಲ; ಅಥವಾ

(ಡಿ) ಅವನನ್ನು ಆ ಪದದಲ್ಲಿ ಮುಂದುವರಿಸಿದರೆ, ಸಾರ್ವಜನಿಕ ಹಿತಾಸಕ್ತಿಗೆ ಬಾಧಕ ಉಂಟಾಗುವಂತೆ ತನ್ನ ಸ್ಥಾನವನ್ನು ದುರುಪಯೋಗಪಡಿಸಿಕೊಳ್ಳುವನೆಂದು ರಾಜ್ಯ ಸರ್ಕಾರವು ಅಭಿಪ್ರಾಯಪಟ್ಟರೆ,

- ಅವನನ್ನು ತೆಗೆದುಹಾಕತಕ್ಕದ್ದು:

ಪರಂತು, ಯಾವೊಬ್ಬ ಸದಸ್ಯನನ್ನು ಅವನಿಗೆ ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಹೇಳಿಕೊಳ್ಳಲು ಒಂದು ಅವಕಾಶವನ್ನು ಕೊಟ್ಟ ಹೊರತು ಈ ಖಂಡದ ಅಡಿಯಲ್ಲಿ ತೆಗೆದುಹಾಕತಕ್ಕದ್ದಲ್ಲ.

**7. ಮರು ನೇಮಕಾತಿಗೆ ಅರ್ಹತೆ.**- ಯಾವೊಬ್ಬ ಸದಸ್ಯನು, ಸದಸ್ಯನಾಗಿರುವುದು ಸಮಾಪ್ತಿಯಾದಾಗ, 5ನೇ ಪ್ರಕರಣದ ಅಡಿಯಲ್ಲಿ ಹೇಳಲಾದ ಅನರ್ಹತೆಗೊಳಗಾಗದ ಹೊರತು, ಸದಸ್ಯನಾಗಿ ಮರುನೇಮಕ ಹೊಂದಲು ಅರ್ಹನಾಗಿರತಕ್ಕದ್ದು.

**8. ಪ್ರಾಧಿಕಾರದ ಅಧಿಕಾರಗಳು**.– (1) ಈ ಅಧಿನಿಯಮದ ಉದ್ದೇಶಗಳು ಮತ್ತು ಉಪಬಂಧಗಳನ್ನು ಜಾರಿಗೆ ತರಲು ಪ್ರಾಧಿಕಾರವು ಅವಶ್ಯಕವೆಂದು ಅಭಿಪ್ರಾಯಪಡುವಂಥ ಯಾವುವೇ ಕಾರ್ಯಗಳನ್ನು ಮಾಡುವುದಕ್ಕೆ ಸಾಮಾನ್ಯವಾಗಿ ಪ್ರಾಧಿಕಾರವು ಅಧಿಕಾರ ಹೊಂದಿರತಕ್ಕದ್ದು:

ಪರಂತು, ಈ ಪ್ರಕರಣದಲ್ಲಿ ಇರುವುದು ಯಾವುದೂ, ಯಾವುದೇ ಇತರ ಪ್ರಾಧಿಕಾರವು ನೆರವೇರಿಸಬೇಕೆಂದು ಅಧಿನಿಯಮದಲ್ಲಿ ನಿರ್ದಿಷ್ಟವಾಗಿ ವಿಧಿಸಲಾದಂಥ ಯಾವುದೇ ಕಾರ್ಯವನ್ನು ನೆರವೇರಿಸಲು ಈ ಪ್ರಾಧಿಕಾರವನ್ನು ಅಧಿಕೃತಗೊಳಿಸಲಾಗಿದೆಯೆಂದು ಭಾವಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದ ಸಾಮಾನ್ಯಾನ್ವಯಕ್ಕೆ ಬಾಧಕವಾಗದಂತೆ ಪ್ರಾಧಿಕಾರವು,–

(ಎ) ನಿಯಮಿಸಬಹುದಾದ ಅಂಥ ನಿಯಮಗಳಿಗೆ ಒಳಪಟ್ಟು, ಈ ಅಧಿನಿಯಮದ ಯಾವುದೇ ಉದ್ದೇಶವನ್ನು ನೆರವೇರಿಸಲು ಅವಶ್ಯಕ ಅಥವಾ ಯುಕ್ತವೆಂದು ತಾನು ಪರಿಗಣಿಸುವಂತಹ ಎಲ್ಲ ಕರಾರುಗಳನ್ನು ಮಾಡಿಕೊಳ್ಳಲು ಮತ್ತು ನೆರವೇರಿಸಲು ಹಾಗೂ ಪ್ರತಿಯೊಂದು ಕರಾರನ್ನು ಪ್ರಾಧಿಕಾರದ ಪರವಾಗಿ ಪ್ರಾಧಿಕಾರದ ಆಯುಕ್ತರು ಮಾಡಿಕೊಳ್ಳತಕ್ಕದ್ದು:

ಪರಂತು, ಐದು ಲಕ್ಷ ರೂಪಾಯಿಗಳು ಅಥವಾ ಅದಕ್ಕೂ ಹೆಚ್ಚು ವೆಚ್ಚವನ್ನೊಳಗೊಳ್ಳುವ ಯಾವ ಕರಾರನ್ನು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿ ಇಲ್ಲದೇ ಮಾಡಿಕೊಳ್ಳತಕ್ಕದ್ದಲ್ಲ.

(ಬಿ) ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ ಮತ್ತು ಈ ಸಂಬಂಧವಾಗಿ ನಿಯಮಿಸಬಹುದಾದ ಅಂಥ ಷರತ್ತಿಗೊಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ ಕಾಲಕಾಲಕ್ಕೆ ಅಗತ್ಯವಾಗುವ ಯಾವುದೇ ಮೊಬಲಗನ್ನು ಸಾಲವಾಗಿ ಪಡೆಯಲು;

(ಸಿ) 37ನೇ ಮತ್ತು 38ನೇ ಪ್ರಕರಣಕ್ಕೆ ಒಳಪಟ್ಟು ಮತ್ತು ನಿಯಮಿಸಬಹುದಾದ ಅಂಥ ನಿರ್ಬಂಧಗಳು, ಷರತ್ತುಗಳು ಮತ್ತು ಪರಿಮಿತಿಗಳಿಗೆ ಒಳಪಟ್ಟು, ತನಗೆ ಸೇರಿದ ಚರ ಅಥವಾ ಸ್ಥಿರ ಸ್ವತ್ತನ್ನು ಗುತ್ತಿಗೆಗೆ ನೀಡಲು, ಮಾರಾಟ ಅಥವಾ ಇತರ ರೀತಿಯಲ್ಲಿ ವರ್ಗಾವಣೆ ಮಾಡಲು, ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಅಭಿವೃದ್ಧಿ ಯೋಜನೆಯ ಉದ್ದೇಶಕ್ಕಾಗಿ ತನ್ನಲ್ಲಿ ನಿಹಿತವಾಗಿರುವ ಅಥವಾ ತಾನು ಆರ್ಜಿಸಿದ ಯಾವುದೇ ಭೂಮಿಯನ್ನು ಮೈದಾನಗಳನ್ನು ರೂಪಿಸುವಾಗ ಅಥವಾ ಕಟ್ಟಡ ನಿರ್ಮಿಸುವ ಉದ್ದೇಶಗಳಿಗಾಗಿ ಅಥವಾ ಇನ್ಯಾವುದೇ ಇತರ ರೀತಿಯಲ್ಲಿ ವಿನಿಯೋಗಿಸಲು ಅಥವಾ ಬಳಸಲು,

– ಅಧಿಕಾರವನ್ನು ಹೊಂದಿರತಕ್ಕದ್ದು.

**9. ಪ್ರಾಧಿಕಾರದ ಉಪ ಸಮಿತಿಗಳು**.– (1) ಪ್ರಾಧಿಕಾರವು, ಯಾವುದೇ ನಿರ್ದಿಷ್ಟ ಉದ್ದೇಶಕ್ಕಾಗಿ, ಆಯುಕ್ತನು ಅಧ್ಯಕ್ಷನಾಗಿರುವ ಮತ್ತು ಪ್ರತಿಯೊಂದು ಉಪಸಮಿತಿಗೆ ಐದು ಜನರಿಗೆ ಮೀರದಂಥ ಇತರ ಸದಸ್ಯರಿರುವ ಒಂದು ಅಥವಾ ಹೆಚ್ಚು ಉಪಸಮಿತಿಗಳನ್ನು ರಚಿಸಬಹುದು. ಉಪಸಮಿತಿಯು ಪರ್ಯಾಲೋಚಿಸಿ ತೀರ್ಮಾನಿಸಿದ ಯಾವುದೇ ವಿಷಯವನ್ನು ಅನುಮೋದನೆ ಅಥವಾ ನಿರಾಕರಣೆಗಾಗಿ ಪ್ರಾಧಿಕಾರದ ಸಭೆಯಲ್ಲಿ ಮಂಡಿಸತಕ್ಕದ್ದು.

(2) ಉಪಸಮಿತಿಯು, ಪ್ರಾಧಿಕಾರವು ಪ್ರತ್ಯಾಯೋಜಿಸಿದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(3) ಪ್ರತಿಯೊಂದು ಉಪಸಮಿತಿಯು ಕನಿಷ್ಠ ಪಕ್ಷ ಮೂರು ತಿಂಗಳಿಗೆ ಒಂದು ಸಲವಾದರೂ ಸಭೆ ಸೇರತಕ್ಕದ್ದು ಮತ್ತು ವಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬಹುದಾದಂತೆ ಅದರ ಸಭೆಯ ಕಾರ್ಯಕಲಾಪಗಳಿಗೆ ಸಂಬಂಧಿಸಿದ ಅಂತಹ ಪ್ರಕ್ರಿಯಾ ನಿಯಮಗಳನ್ನು ಪಾಲಿಸತಕ್ಕದ್ದು.

**10. ಆಯುಕ್ತನ ನೇಮಕಾತಿ**.– (1) ರಾಜ್ಯ ಸರ್ಕಾರವು, ಸರ್ಕಾರದ ಉಪ ಕಾರ್ಯದರ್ಶಿ ದರ್ಜೆಗೆ ಕಡಿಮೆಯಲ್ಲದ ದರ್ಜೆಯ ಅಧಿಕಾರಿಯನ್ನು ಪ್ರಾಧಿಕಾರದ ಆಯುಕ್ತನನ್ನಾಗಿ ನೇಮಿಸತಕ್ಕದ್ದು.

(2) ಆಯುಕ್ತನು, ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದ ಅಂಥ ವೇತನ ಮತ್ತು ಇತರ ಭತ್ಯಗಳನ್ನು ಸ್ವೀಕರಿಸತಕ್ಕದ್ದು. ಆಯುಕ್ತನ ಸೇವಾ ಷರತ್ತುಗಳು ಕರ್ನಾಟಕ ಸಿವಿಲ್ ಸೇವಾ ನಿಯಮಗಳಿಗೆ ಒಳಪಡತಕ್ಕದ್ದು.

(3) ರಾಜ್ಯ ಸರ್ಕಾರವು, ತಾನು ಯುಕ್ತವೆಂದು ಭಾವಿಸುವ ಅಂಥ ಅವಧಿಗಾಗಿ ಆಯುಕ್ತನಿಗೆ ಗೈರು ಹಾಜರಾಗಲು ಅನುಮತಿ ನೀಡಬಹುದು.

**11. ಆಯುಕ್ತನ ಅಧಿಕಾರಗಳು ಮತ್ತು ಕರ್ತವ್ಯಗಳು**.– (1) ಆಯುಕ್ತನು, ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕ ಮತ್ತು ಆಡಳಿತಾಧಿಕಾರಿಯಾಗಿರತಕ್ಕದ್ದು.

(2) ಆಯುಕ್ತನು, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ತನಗೆ ಪ್ರದತ್ತವಾಗಿರುವಂತಹ ಪ್ರಕಾರ್ಯಗಳನ್ನು ನೆರವೇರಿಸುವುದರ ಜೊತೆಗೆ,–

(ಎ) ಪ್ರಾಧಿಕಾರದ ಗೊತ್ತುವಳಿಗಳನ್ನು ಕಾರ್ಯಗತಗೊಳಿಸತಕ್ಕದ್ದು;

(ಬಿ) ಪ್ರಾಧಿಕಾರದ ವ್ಯವಹಾರವನ್ನು ನಡೆಸುವುದು ಮತ್ತು ಪತ್ರ ವ್ಯವಹಾರವನ್ನು ನಡೆಸುವುದು;

(ಸಿ) ಸರ್ಕಾರವು ನಿರ್ದೇಶಿಸಬಹುದಾದ ಅಂಥ ಯೋಜನೆಗಳನ್ನು ಕಾರ್ಯಗತಗೊಳಿಸುವುದು ಮತ್ತು ಕಾಮಗಾರಿಗಳನ್ನು ನಿರ್ವಹಿಸುವುದು ಹಾಗೂ ಅದಕ್ಕೆ ಸಂಬಂಧಿಸಿದಂತೆ ಅವಶ್ಯಕ ವೆಚ್ಚಗಳನ್ನು ಭರಿಸುವುದು;

(ಡಿ) ಪ್ರಾಧಿಕಾರದ ಯೋಜನೆಗಳ ಅನುಷ್ಠಾನಕ್ಕೆ ಜವಾಬ್ದಾರರಾಗಿರತಕ್ಕದ್ದು;

(ಇ) ಪ್ರಾಧಿಕಾರದ ಬ್ಯಾಂಕ್ ಖಾತೆಗಳಲ್ಲಿ ವ್ಯವಹಾರ ನಡೆಸತಕ್ಕದ್ದು ಮತ್ತು ಪ್ರಾಧಿಕಾರದ ಲೆಕ್ಕಪತ್ರಗಳನ್ನು ನಿರ್ವಹಿಸಲು ಜವಾಬ್ದಾರರಾಗಿರತಕ್ಕದ್ದು;

(ಎಫ್) ಪ್ರಾಧಿಕಾರದ ಅಧಿಕಾರಿಗಳು ಮತ್ತು ನೌಕರರ ಮೇಲೆ ಕಾರ್ಯನಿರ್ವಹಣೆ ಆಡಳಿತ ವಿಷಯಗಳು ಮತ್ತು ಅಂತಹ ಅಧಿಕಾರಿಗಳು ಮತ್ತು ನೌಕರರ ಸೇವಾ ಷರತ್ತುಗಳು ಹಾಗೂ ಅವರ ವೇತನ ಮತ್ತು ಭತ್ಯೆಗಳನ್ನು ವಿನಿಯಮನಗೊಳಿಸುವ ಬಗ್ಗೆ ಮೇಲ್ವಿಚಾರಣೆ ಹಾಗೂ ನಿಯಂತ್ರಣವನ್ನು ಹೊಂದಿರತಕ್ಕದ್ದು.

(ಜಿ) ಪ್ರಾಧಿಕಾರದ ಸಂಕ್ಷಿಪ್ತ ಟಿಪ್ಪಣಿಗಳ ಮತ್ತು ರಾಜ್ಯ ಸರ್ಕಾರವು ಕಾಲಕಾಲಕ್ಕೆ ಕೋರಬಹುದಾದ ಯಾವುದೇ ಲಿಖಿತ ಪತ್ರದ ಪ್ರತಿಯನ್ನು ಅಥವಾ ಇತರ ಮಾಹಿತಿಯನ್ನು ರಾಜ್ಯ ಸರ್ಕಾರಕ್ಕೆ ಒದಗಿಸತಕ್ಕದ್ದು; ಮತ್ತು

(ಎಚ್) ಈ ಅಧಿನಿಯಮದ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಇತರ ಯಾವುದೇ ಕಾನೂನಿನ ಮೂಲಕ ಅಥವಾ ಅದರ ಅಡಿಯಲ್ಲಿ ಆತನಿಗೆ ಪ್ರದತ್ತವಾದ ಅಂಥ ಇತರ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

**12. ಪ್ರಾಧಿಕಾರದ ನೌಕರರು.**– (1) ನಿಯಮಿಸಬಹುದಾದ ಅಂಥ ನಿಯಮಗಳಿಗೊಳಪಟ್ಟು ಪ್ರಾಧಿಕಾರವು, ಅಧಿನಿಯಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅದು ಅವಶ್ಯವೆಂದು ಭಾವಿಸುವಂತಹ ಸಂಖ್ಯೆಯ ನೌಕರರನ್ನು ನೇಮಕ ಮಾಡಿಕೊಳ್ಳಬಹುದು:

ಪರಂತು, ರಾಜ್ಯ ಸರ್ಕಾರವು ಭಾರತೀಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಸೇವೆಯಿಂದಾಗಲಿ ಅಥವಾ ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರಗಳ ಸೇವೆಗಳಿಂದಾಗಲಿ, "ಎ" ಗುಂಪಿನ ಕಿರಿಯ ವೇತನ ಶ್ರೇಣಿಯ ದರ್ಜೆಗಿಂತ ಕಡಿಮೆಯಲ್ಲದ ಅಧಿಕಾರಿಯನ್ನು ಪ್ರತಿನಿಯೋಜನೆಯ ಮೇಲೆ ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯಾಗಿ ನೇಮಕ ಮಾಡತಕ್ಕದ್ದು.

(2) ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯು ಆಯುಕ್ತನಿಗೆ ವರದಿ ಸಲ್ಲಿಸತಕ್ಕದ್ದು ಮತ್ತು ಪ್ರಾಧಿಕಾರದ ಹಣಕಾಸು ವ್ಯವಹಾರಗಳ ಬಗ್ಗೆ ವಾಸ್ತವಿಕವಾದ ಹಾಗೂ ನ್ಯಾಯಯುತವಾದ ಚಿತ್ರಣವನ್ನು ನೀಡುವ ಮೂಲಕ ಹಣಕಾಸು ನಿಯಮಗಳನ್ನು ಪಾಲಿಸಲಾಗುತ್ತಿದೆ ಮತ್ತು ಲೆಕ್ಕಪತ್ರಗಳನ್ನು ಅಂದಂದಿನವರೆಗೆ ನಿರ್ವಹಿಸಲಾಗುತ್ತಿದೆ ಎಂಬುದನ್ನು ಖಚಿತಪಡಿಸತಕ್ಕದ್ದು.

(3) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ನೌಕರರ ವೇತನಗಳು, ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಆಯುಕ್ತನು ಪ್ರಾಧಿಕಾರದ ನೌಕರರಿಗೆ ಸಂಬಂಧಿಸಿದಂತೆ ನೇಮಕಾತಿ ಅಧಿಕಾರಿಯಾಗಿರತಕ್ಕದ್ದು ಮತ್ತು ಪ್ರಾಧಿಕಾರದ ಸಿಬ್ಬಂದಿಯ ಮೇಲೆ ಸಾಮಾನ್ಯ ನಿಯಂತ್ರಣ ಮತ್ತು ಮೇಲ್ವಿಚಾರಣೆಯನ್ನು ಹೊಂದಿರತಕ್ಕದ್ದು.

**13. ಪ್ರಾಧಿಕಾರದ ಅಡಿಯಲ್ಲಿನ ಸೇವೆಗಳಿಗಾಗಿ ಸಾಮಾನ್ಯ ಅನರ್ಹತೆಗಳು.**– ಯಾವೊಬ್ಬ ವ್ಯಕ್ತಿಯು ಖುದ್ದಾಗಿ ಅಥವಾ ಅವನ ಪಾಲುದಾರನ ಮೂಲಕ ಅಥವಾ ಅವನ ಏಜೆಂಟ್‌ನ ಮೂಲಕ, ಪ್ರಾಧಿಕಾರದ ಮೂಲಕ ಅಥವಾ ಅದರ ಪರವಾಗಿ ಯಾವುದೇ ಕರಾರಿನಲ್ಲಿ ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ, ಪ್ರಾಧಿಕಾರದ ಅಧಿಕಾರಿ ಅಥವಾ ಉದ್ಯೋಗಿಯಾಗತಕ್ಕದ್ದಲ್ಲ ಅಥವಾ ಆಗಿರತಕ್ಕದ್ದಲ್ಲ.

**14. ಪ್ರಾಧಿಕಾರದ ಸಭೆಗಳು.**– (1) ಅಧ್ಯಕ್ಷರ ಪೂರ್ವಾನುಮತಿಯೊಂದಿಗೆ, ಅಧ್ಯಕ್ಷರು ಯುಕ್ತವೆಂದು ಭಾವಿಸಬಹುದಾದ ಅಂಥ ಅವಧಿಗಳ ಅಂತರದಲ್ಲಿ ಮತ್ತು ಅಧ್ಯಕ್ಷರು ನಿರ್ಧರಿಸಬಹುದಾದ ಅಂಥ ಸ್ಥಳದಲ್ಲಿ ಪ್ರಾಧಿಕಾರದ ಸಭೆಗಳನ್ನು ನಡೆಸತಕ್ಕದ್ದು:

ಪರಂತು, ಪ್ರಾಧಿಕಾರವು ಒಂದು ಕ್ಯಾಲೆಂಡರ್ ವರ್ಷದಲ್ಲಿ ಕನಿಷ್ಠ ಎರಡು ಬಾರಿಯಾದರೂ ಸಭೆ ಸೇರಿಸತಕ್ಕದ್ದು.

(2) ಪ್ರತಿಯೊಂದು ಸಭೆಯಲ್ಲಿ ಅಧ್ಯಕ್ಷನು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಯಾವುದೇ ಕಾರಣದಿಂದಾಗಿ ಅಧ್ಯಕ್ಷನಿಗೆ ಯಾವುದೇ ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ, ಉಪಾಧ್ಯಕ್ಷನು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು, ಯಾವುದೇ ಕಾರಣದಿಂದಾಗಿ ಉಪಾಧ್ಯಕ್ಷನು ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ, ಸಭೆಯಲ್ಲಿ ಹಾಜರಿರುವ ಸದಸ್ಯರ ಪೈಕಿ ಆಯ್ಕೆ ಮಾಡಲಾಗುವ ಯಾವೊಬ್ಬ ಇತರ ಸದಸ್ಯನು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು.

(3) ಪ್ರಾಧಿಕಾರದ ತೀರ್ಮಾನಗಳನ್ನು ಹಾಜರಿದ್ದು ಮತ ಹಾಕುವ ಸದಸ್ಯರ ಅವಿರೋಧ ಸಮ್ಮತಿ ಸೂಚಕ ಮೂಲಕ ಕೈಗೊಳ್ಳತಕ್ಕದ್ದು. ಪ್ರಾಧಿಕಾರದ ಮುಂದೆ ತೀರ್ಮಾನಕ್ಕಾಗಿ ಬಂದ ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುದೇ ಭಿನ್ನಾಭಿಪ್ರಾಯಗಳಿದ್ದಲ್ಲಿ ಆಯುಕ್ತನು ಆ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ವಿಷಯಗಳ ಬಗ್ಗೆ ರಾಜ್ಯ ಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

(4) ಆಯುಕ್ತನು, ಪ್ರಾಧಿಕಾರದ ತೀರ್ಮಾನಗಳನ್ನು ಕಾರ್ಯಗತಗೊಳಿಸತಕ್ಕದ್ದು:

ಪರಂತು, ಪ್ರಾಧಿಕಾರವು ಕೈಗೊಂಡ ನಿರ್ಣಯವು, ಈ ಅಧಿನಿಯಮದ ಅಥವಾ ಇತರ ಕಾನೂನಿನ ಉಪಬಂಧವನ್ನು ಅಥವಾ ಈ ಅಧಿನಿಯಮದ ಅಥವಾ ಇತರ ಯಾವುದೇ ಕಾನೂನಿನ ಅಡಿಯಲ್ಲಿ ರಚಿಸಲಾದ ಅಥವಾ ಹೊರಡಿಸಿದ ಯಾವುದೇ ನಿಯಮ ಅಥವಾ ಅಧಿಸೂಚನೆ ಅಥವಾ ವಿನಿಯಮಗಳ ಉಪಬಂಧವನ್ನು ಅಥವಾ ರಾಜ್ಯ ಸರ್ಕಾರವು ಹೊರಡಿಸಿದ ಯಾವುದೇ ಆದೇಶವನ್ನು ಉಲ್ಲಂಘಿಸುತ್ತದೆಯೆಂದು ಅಥವಾ ಪ್ರಾಧಿಕಾರದ ಹಿತಾಸಕ್ತಿಗೆ ಅಥವಾ

ಪ್ರಾಧಿಕಾರದ ಅಭಿವೃದ್ಧಿ ಮತ್ತು ನಿರ್ವಹಣೆಗೆ ಧಕ್ಕೆ ಉಂಟುಮಾಡುತ್ತದೆ ಅಥವಾ ಹಾನಿಕಾರಕವಾಗುತ್ತದೆಯೆಂದು ಆಯುಕ್ತರು ಅಭಿಪ್ರಾಯಪಟ್ಟರೆ, ಆತನ ನಿರ್ಣಯವನ್ನು ಅನುಮೋದಿಸಲಾದ ಹದಿನೈದು ದಿನಗಳ ಒಳಗಾಗಿ ಆ ವಿಷಯದ ಬಗ್ಗೆ ಆದೇಶಗಳನ್ನು ಕೋರಿ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಪ್ರಾಧಿಕಾರದ ಮುಂದಿನ ಸಭೆಯಲ್ಲಿ ತಾನು ಕೈಗೊಂಡ ಕ್ರಮದ ಬಗ್ಗೆ ಪ್ರಾಧಿಕಾರಕ್ಕೆ ತಿಳಿಸತಕ್ಕದ್ದು ಮತ್ತು ಆಯುಕ್ತನು ಕಳುಹಿಸಿಕೊಟ್ಟ ಅಂತಹ ವಿಷಯದ ಬಗ್ಗೆ ರಾಜ್ಯ ಸರ್ಕಾರವು ಆದೇಶವನ್ನು ನೀಡುವವರೆಗೆ ಆಯುಕ್ತನು ಆ ನಿರ್ಣಯವನ್ನು ಜಾರಿಗೆ ತರಲು ಬದ್ಧನಾಗಿರತಕ್ಕದ್ದಲ್ಲ.

(5) ಪ್ರಾಧಿಕಾರವು, ವಿನಿಮಯಗಳ ಮೂಲಕ, ತನ್ನ ಸಭೆಗಳ ಕಾರ್ಯಕಲಾಪಗಳಿಗೆ ಸಂಬಂಧಪಟ್ಟಂತೆ ಈ ಅಧಿನಿಯಮದ ಉಪಬಂಧಗಳಿಗೆ ಅಥವಾ ನಿಯಮಗಳಿಗೆ ಅಸಂಗತವಾಗದಂತಹ, ಕಾರ್ಯವಿಧಾನಗಳನ್ನು ಗೊತ್ತುಪಡಿಸಬಹುದು.

**15. ವ್ಯವಹರಣೆಗಳು ಸರಿಯಾದುದೆಂದು ಮತ್ತು ಊರ್ಜಿತವಾದುದೆಂದು ಪೂರ್ವಭಾವನೆ ಮಾಡುವುದು.–** ಅಧ್ಯಕ್ಷರಾಗಿ ಅಥವಾ ಸದಸ್ಯರಾಗಿ ಕಾರ್ಯನಿರ್ವಹಿಸುವ ಯಾವೊಬ್ಬ ವ್ಯಕ್ತಿಯ ಅನರ್ಹತೆ ಅಥವಾ ನೇಮಕಾತಿಯಲ್ಲಿನ ನ್ಯೂನತೆಯು ಪ್ರಾಧಿಕಾರದ ಯಾವುದೇ ಕೃತ್ಯ ಅಥವಾ ನಡುವಳಿಯು ಅನ್ಯಥಾ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿದ್ದರೆ ಅಂತಹ ಕೃತ್ಯ ಅಥವಾ ವ್ಯವಹರಣೆಯನ್ನು ದೂಷಿತಗೊಳಿಸುತ್ತದೆಂದು ಭಾವಿಸತಕ್ಕದ್ದಲ್ಲ.

**16. ಟಿಪ್ಪಣಿಯ ಪರಿಚಲನೆಯ ಮೂಲಕ ಪ್ರಾಧಿಕಾರದ ತೀರ್ಮಾನಗಳು.–** (1) ಅಧ್ಯಕ್ಷರು, ಯಾವುದೇ ಪ್ರಕರಣವನ್ನು, ಪ್ರಾಧಿಕಾರದ ಒಂದು ಸಭೆಯಲ್ಲಿ ಚರ್ಚೆಗೆ ತರುವುದಕ್ಕೆ ಬದಲಾಗಿ, ಆ ಬಗ್ಗೆ ಅವರ ಅಭಿಪ್ರಾಯ ಕೋರಿ ನಿಯಮಿಸಲಾದ ನಮೂನೆಯಲ್ಲಿ ಒಂದು ಟಿಪ್ಪಣಿಯನ್ನು ಸದಸ್ಯರ ನಡುವೆ ಪರಿಚಲನೆ ಮಾಡಿಸಲು ನಿರ್ದೇಶಿಸಬಹುದು ಹಾಗೆ ಪರಿಚಲನೆ ಮಾಡಲಾದ ಟಿಪ್ಪಣಿಯಲ್ಲಿರುವ ಪ್ರಸ್ತಾವವನ್ನು ಎಲ್ಲಾ ಸದಸ್ಯರು ಅವಿರೋಧವಾಗಿ ಒಪ್ಪಿಕೊಂಡಲ್ಲಿ ಅದನ್ನು ಪ್ರಾಧಿಕಾರದ ಸಮ್ಮತಿಸೂಚಕ ನಿರ್ಣಯವೆಂಬುದಾಗಿ ಭಾವಿಸತಕ್ಕದ್ದು ಮತ್ತು ತದನುಸಾರವಾಗಿ ಮುಂದಿನ ಕ್ರಮ ಕೈಗೊಳ್ಳತಕ್ಕದ್ದು. ಪ್ರಾಧಿಕಾರದ ತೀರ್ಮಾನಕ್ಕಾಗಿ ಪರಿಚಲನೆ ಮಾಡಲಾದ ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುದೇ ಭಿನ್ನಾಭಿಪ್ರಾಯ ವ್ಯಕ್ತವಾದರೆ ಆಯುಕ್ತನು ಆ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಅಭಿಪ್ರಾಯಕ್ಕಾಗಿ ಪರಿಚಲನೆ ಮಾಡಲಾದ ಸಂದರ್ಭಗಳಲ್ಲಿ, ಯಾವೊಬ್ಬ ಸದಸ್ಯನು ಟಿಪ್ಪಣಿಯಲ್ಲಿ ನಿರ್ದಿಷ್ಟಪಡಿಸಿರುವ ದಿನಾಂಕದೊಳಗೆ ತನ್ನ ಅಭಿಪ್ರಾಯವನ್ನು ತಿಳಿಸಲು ತಪ್ಪಿದರೆ ಅಂತಹ ಸದಸ್ಯನು ಪರಿಚಲನೆ ಮಾಡಲಾದ ಟಿಪ್ಪಣಿಯಲ್ಲಿ ಒಳಗೊಂಡ ಪ್ರಸ್ತಾವವನ್ನು ಒಪ್ಪಿಕೊಂಡಿದ್ದಾರೆಂದು ಭಾವಿಸತಕ್ಕದ್ದು.

(3) 14ನೇ ಪ್ರಕರಣದ ಉಪಬಂಧಗಳು ಯಥೋಚಿತ ವ್ಯತ್ಯಾಸಗಳೊಂದಿಗೆ, ಈ ಪ್ರಕರಣದ ಅಡಿಯಲ್ಲಿ ಪರಿಚಲನೆ ಮೂಲಕ ಕೈಕೊಂಡ ಪ್ರಾಧಿಕಾರದ ತೀರ್ಮಾನಗಳಿಗೆ ಅನ್ವಯವಾಗತಕ್ಕದ್ದು.

(4) (1)ನೇ ಉಪಪ್ರಕರಣದ ಅಡಿಯಲ್ಲಿ ಪರಿಚಲನೆಯ ಟಿಪ್ಪಣಿಯ ಅಂಶಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

**17. ಕೆಲವು ತೀರ್ಮಾನಗಳನ್ನು ಕೈಗೊಳ್ಳಲು ಅಧ್ಯಕ್ಷನ ಅಧಿಕಾರ.–** (1) ಯಾವೊಂದು ವಿಷಯವು 14ನೇ ಪ್ರಕರಣದ ಅಡಿಯಲ್ಲಿ ಪ್ರಾಧಿಕಾರದ ಸಭೆಯನ್ನು ಕರೆಯಲು ಅಗತ್ಯಪಡಿಸುವಷ್ಟು ಅಥವಾ 16ನೇ ಪ್ರಕರಣದ ಅಡಿಯಲ್ಲಿ ಸುತ್ತೋಲೆಯ ಮೂಲಕ ಪ್ರಾಧಿಕಾರವು ತೀರ್ಮಾನಿಸುವವರೆಗೂ ಕಾಯಲು ಸಾಧ್ಯವಾಗದಷ್ಟು ತುರ್ತು ಸ್ವರೂಪದ್ದಾಗಿದೆಯೆಂದು ಅಥವಾ ವಿಷಯವು ಗಹನವಾದುದಲ್ಲವೆಂದು ಅಧ್ಯಕ್ಷನು ಅಭಿಪ್ರಾಯಪಟ್ಟಲ್ಲಿ, ಆತನು ಯುಕ್ತವೆಂದು ಭಾವಿಸುವ ಅಂಥ ಆದೇಶಗಳನ್ನು ನೀಡಬಹುದು ಮತ್ತು ಅದನ್ನು ಪ್ರಾಧಿಕಾರದ ತೀರ್ಮಾನಗಳ ರೀತಿಯಲ್ಲಿಯೇ ಅನುಷ್ಠಾನಗೊಳಿಸತಕ್ಕದ್ದು:

ಪರಂತು, ಅಧ್ಯಕ್ಷನು ಈ ಪ್ರಕರಣದ ಅಡಿಯಲ್ಲಿ ಕೈಗೊಂಡ ಪ್ರತಿಯೊಂದು ತೀರ್ಮಾನವನ್ನು ಪ್ರಾಧಿಕಾರದ ಮುಂದಿನ ಸಭೆಯಲ್ಲಿ ಮಂಡಿಸತಕ್ಕದ್ದು.

## ಅಧ್ಯಾಯ– III
## ಪಾರಂಪರಿಕ ತಾಣಗಳ ಅಭಿವೃದ್ಧಿ ಮತ್ತು ನಿರ್ವಹಣೆ

**18. ಪಾರಂಪರಿಕ ತಾಣಗಳು.–** (1) ಯಾವುದೇ ಪದ್ಧತಿ, ಸಂಪ್ರದಾಯ, ರೂಢಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ಸೃಜಿಸಲಾದ ಮತ್ತು ಅಸ್ತಿತ್ವದಲ್ಲಿರುವ ಯಾವುದೇ ನ್ಯಾಸದ ನಿಬಂಧನೆಗಳಲ್ಲಿ ಏನೇ ಇದ್ದರೂ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಎಲ್ಲಾ ಅಥವಾ ಯಾವುವೇ ಪಾರಂಪರಿಕ ತಾಣಗಳ ನಿಯಂತ್ರಣ, ಒಡೆತನ, ಆಡಳಿತ ವ್ಯವಸ್ಥೆ ಮತ್ತು ಮೇಲ್ವಿಚಾರಣೆಯು, ಈಗಾಗಲೇ ರಾಜ್ಯ ಸರ್ಕಾರದಲ್ಲಿ ನಿಹಿತವಾಗಿರದಿದ್ದಲ್ಲಿ, ರಾಜ್ಯ ಸರ್ಕಾರವು, ಭೂ ಅರ್ಜನೆ ಪುನರ್ವಸತಿ ಮತ್ತು ಪುನಶ್ಚೇತನದಲ್ಲಿ ನ್ಯಾಯಯುತ ಪರಿಹಾರದ ಹಕ್ಕು ಮತ್ತು ಪಾರದರ್ಶಕತೆ ಅಧಿನಿಯಮ, 2013ರ (2013ರ ಕೇಂದ್ರ ಅಧಿನಿಯಮ 30) ಅನುಸಾರ ಅರ್ಜಿಸತಕ್ಕದ್ದು ಮತ್ತು ತದನಂತರ ರಾಜ್ಯ ಸರ್ಕಾರವು ಅಧಿಸೂಚಿಸಿದ ದಿನಾಂಕದಿಂದ ಆ ಭೂಮಿಯು ಪ್ರಾಧಿಕಾರಕ್ಕೆ ವರ್ಗಾವಣೆಯಾಗತಕ್ಕದ್ದು:

ಪರಂತು, ಈ ಅಧಿನಿಯಮದ ಮೇರೆಗೆ ಆರ್ಜಿಸಿದ ಭೂಮಿಯು, ಭೂ ಆರ್ಜನೆ ಪುನರ್ವಸತಿ ಮತ್ತು ಪುನಶ್ಚೇತನದಲ್ಲಿ ನ್ಯಾಯಯುತ ಪರಿಹಾರದ ಹಕ್ಕು ಮತ್ತು ಪಾರದರ್ಶಕತೆ ಅಧಿನಿಯಮ, 2013ರ (2013ರ ಕೇಂದ್ರ ಅಧಿನಿಯಮ 30) ಅಡಿಯಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಆರ್ಜಿಸಲಾದ ಭೂಮಿ ಎಂದು ಭಾವಿಸತಕ್ಕದ್ದು.

(2) ರಾಜ್ಯ ಸರ್ಕಾರವು, ತಾತ್ಕಾಲಿಕ ಉಪಬಂಧಗಳನ್ನು ಕಲ್ಪಿಸುವುದು ಯುಕ್ತವೆಂದು ಭಾವಿಸಿದರೆ, ಅದು ಸಾಮಾನ್ಯ ಅಥವಾ ವಿಶೇಷ ಆದೇಶದ ಮೂಲಕ ಹಾಗೆ ಮಾಡಬಹುದು.

**19. ಅನುಸೂಚಿಯನ್ನು ತಿದ್ದುಪಡಿ ಮಾಡುವ ಅಧಿಕಾರ.–** ರಾಜ್ಯ ಸರ್ಕಾರವು, ನಿಯಮಿಡಬಹದುಆದ ಅಂಥ ಕಾರ್ಯವಿಧಾನವನ್ನು ಅನುಸರಿಸಿದ ತರುವಾಯ, ಅಧಿಸೂಚನೆಯ ಮೂಲಕ ಅನುಸೂಚಿಯಲ್ಲಿ ಯಾವುದೇ ನಮೂದನ್ನು ಸೇರಿಸಿ ಅಥವಾ ಮಾರ್ಪಡಿಸಿ ಅದನ್ನು ತಿದ್ದುಪಡಿ ಮಾಡಬಹುದು.

**20. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು.–** (1) ಪ್ರಾಧಿಕಾರವು, ಅದರ ರಚನೆಯಾದ ಮೇಲೆ, ಆದಷ್ಟು ಬೇಗನೆ ಅಂತಾರಾಷ್ಟ್ರೀಯ ಪಾರಂಪರಿಕ, ಸಾಂಸ್ಕೃತಿಕ ಹಾಗೂ ಪ್ರವಾಸಿ ಕೇಂದ್ರವನ್ನಾಗಿ ಮಾಡಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ರಾಮನಗರ ಮತ್ತು ತುಮಕೂರು ಜಿಲ್ಲೆಗಳಲ್ಲಿ ಮತ್ತು ಸುತ್ತಮುತ್ತಲು, ನಾಡಪ್ರಭು ಕೆಂಪೇಗೌಡ ಪಾರಂಪರಿಕ ಸ್ಥಳಗಳು, ಪ್ರವಾಸಿ ತಾಣಗಳು ಮತ್ತು ಸ್ಮಾರಕಗಳನ್ನು ಅಭಿವೃದ್ಧಿಪಡಿಸುವುದಕ್ಕಾಗಿ ಮತ್ತು ನಿರ್ವಹಿಸುವುದಕ್ಕಾಗಿ ಯೋಜನೆಯನ್ನು ಸಿದ್ಧಪಡಿಸತಕ್ಕದ್ದು. ಅಭಿವೃದ್ಧಿ ಯೋಜನೆಯು ಈ ಮುಂದಿನವುಗಳನ್ನು ಒಳಗೊಳ್ಳಬಹುದು, ಎಂದರೆ:–

(ಎ) ಯಾವುದೇ ಪಾರಂಪರಿಕ ತಾಣ ಅಥವಾ ರಚನೆ, ಅದರಲ್ಲೂ ಪ್ರಮುಖವಾಗಿ ಕೋಟೆಯ ಒಳಭಾಗದ ಸಂರಕ್ಷಣೆ ಮತ್ತು ಜೀರ್ಣೋದ್ಧಾರ ಹಾಗೂ ಪುನರ್ ನಿರ್ಮಾಣ ಮತ್ತು ಅದರ ನಿರ್ವಹಣೆ, ಪುನರ್ ನಿರ್ಮಾಣಕ್ಕಾಗಿ ಕಾರ್ಯಕ್ರಮಗಳನ್ನು ರೂಪಿಸುವುದು;

(ಬಿ) ಪ್ರಾಧಿಕಾರದ ಅಭಿಪ್ರಾಯದಲ್ಲಿ, ಅಭಿವೃದ್ಧಿ ಯೋಜನೆಯನ್ನು ಕಾರ್ಯಗತಗೊಳಿಸಲು ಅವಶ್ಯವಿರುವ ಭೂಮಿಯನ್ನು ಆರ್ಜನೆ ಅಥವಾ ಖರೀದಿಯ ಅಥವಾ ವಿನಿಯಮ ಅಥವಾ ಅನ್ಯಥಾ ಮೂಲಕ ಆರ್ಜಿಸುವುದಕ್ಕಾಗಿ ಪ್ರಸ್ತಾವಗಳನ್ನು ಸಲ್ಲಿಸುವುದು;

(ಸಿ) ಸಾರ್ವಜನಿಕ ಉದ್ಯಾನವನಗಳು, ತೋಟಗಾರಿಕೆ ಅಥವಾ ಮೃಗಾಲಯಗಳನ್ನು, ಚಿಲುಮೆಗಳಿರುವ ವನಗಳ, ಕೃತಕ ಜಲಪಾತಗಳ, ಆಟದ ಉದ್ಯಾನವನಗಳ, ದೋಣಿ ವಿಹಾರದ ಅಥವಾ ನೀರಿನ ಇತರ ಕ್ರೀಡೆಯ ಸೌಲಭ್ಯವಿರುವ ಸರೋವರಗಳನ್ನು ಅಥವಾ ಪ್ರವಾಸಿ ಆಕರ್ಷಣೆಯ ಇತರ ಕೇಂದ್ರಗಳನ್ನು ನಿರ್ಮಿಸುವುದು;

(ಡಿ) ಬೇರೆ ಬೇರೆ ವರ್ಗದ ಪ್ರವಾಸಿಗರ ಅಗತ್ಯತೆಗಳನ್ನು ಈಡೇರಿಸುವುದಕ್ಕೆ ಛತ್ರಗಳು, ವಸತಿ-ಗೃಹಗಳು, ಕಾಟೇಜುಗಳು, ಹೋಟೆಲುಗಳು, ರೆಸ್ಟೋರೆಂಟುಗಳು ಮತ್ತು ಊಟದ ಮನೆಗಳನ್ನು ನಿರ್ಮಿಸುವುದು;

(ಇ) ಅವಶ್ಯಕ ಅಂಗಡಿಗಳ ಸಾಲುಗಳನ್ನು ಅಥವಾ ಅಂಗಡಿ-ಸಂಕೀರ್ಣಗಳನ್ನು ನಿರ್ಮಿಸುವುದು; (ಎಫ್) 2ನೇ ಪ್ರಕರಣದ (ಎ) ಖಂಡದಲ್ಲಿ ಪರಿಭಾಷಿಸಲಾದಂತೆ ಸೌಕರ್ಯಗಳನ್ನು ಕಲ್ಪಿಸುವುದು;

(ಜಿ) ಕಟ್ಟಡಗಳ ನಿರ್ಮಾಣ ಹಾಗೂ ಪುನರ್-ನಿರ್ಮಾಣವೂ ಸೇರಿದಂತೆ ಎಲ್ಲಾ ಅಥವಾ ಯಾವುದೇ ಭೂಮಿಯನ್ನು ವಿನ್ಯಾಸ ಮತ್ತು ಮರು ವಿನ್ಯಾಸಗೊಳಿಸುವುದು;

(ಹೆಚ್) ಚರಂಡಿ ವ್ಯವಸ್ಥೆ, ವಿದ್ಯುಚ್ಛಕ್ತಿ ಮತ್ತು ನೀರು ಪೂರೈಕೆ ಮತ್ತು ನೈರ್ಮಲ್ಯ ವ್ಯವಸ್ಥೆಯ ಏರ್ಪಾಡು ಮಾಡುವುದು;

(ಐ) ಪ್ರಾಧಿಕಾರವು, ಸಾಮಾನ್ಯವಾಗಿ ಅದರ ಯೋಜನಾ ಕಾರ್ಯಕ್ಕೆ ಮತ್ತು ನಿರ್ದಿಷ್ಟವಾಗಿ ಉತ್ತಮ ಚರಂಡಿ ವ್ಯವಸ್ಥೆಯನ್ನು ಒದಗಿಸುವುದಕ್ಕೆ ಅನುವಾಗುವಂತೆ ಯಾವುದೇ ಭೂಮಿಯನ್ನು ಎತ್ತರಿಸುವುದು ಸೂಕ್ತವೆಂದು ಭಾವಿಸಿದರೆ ಅಂಥ ಭೂಮಿಯನ್ನು ಎತ್ತರಿಸುವುದು;

(ಜೆ) ಕಟ್ಟಡಗಳ ನಿರ್ಮಾಣ ಮತ್ತು ಪುನರ್‌ನಿರ್ಮಾಣ, ಅವುಗಳ ನಿರ್ವಹಣೆ ಮತ್ತು ಸಂರಕ್ಷಣೆ ಮಾಡುವುದು;

(ಕೆ) ಸಂಪರ್ಕ ಮತ್ತು ಸಾಗಣೆಗಾಗಿ ಸೌಲಭ್ಯಗಳನ್ನು ಕಲ್ಪಿಸುವುದು;

(ಎಲ್) ನಾಡಪ್ರಭು ಕೆಂಪೇಗೌಡ ಪಾರಂಪರಿಕ ಪ್ರದೇಶವನ್ನು ಸಾಂಸ್ಕೃತಿಕ ಕೇಂದ್ರವನ್ನಾಗಿ, ಯಾತ್ರಾ ಸ್ಥಳವನ್ನಾಗಿ ಮತ್ತು ಅಂತರರಾಷ್ಟ್ರೀಯ ಪ್ರವಾಸಿ ಕೇಂದ್ರವನ್ನಾಗಿ ಮಾಡುವುದು ಮತ್ತು ನಾಡಪ್ರಭು ಕೆಂಪೇಗೌಡರನ್ನು ಕುರಿತಂತೆ ಚರ್ಚಾ ಕೇಂದ್ರವನ್ನಾಗಿ ಮಾಡುವುದಷ್ಟೇ ಅಲ್ಲದೆ, ಅವರಿಗೆ ಸಂಬಂಧಪಟ್ಟ ಮಹತ್ವದ ಸ್ಥಳಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಮತ್ತು ಅಧ್ಯಯನಕ್ಕೆ ಸಂಬಂಧಿಸಿದಂತೆ ಶಿಕ್ಷಣ ಮತ್ತು ಸಂಶೋಧನಾ ಕೇಂದ್ರದ ಸ್ಥಾಪನೆಗಾಗಿ ಹಾಗೂ ಆ ವಿಷಯದ ಬಗ್ಗೆ ವಿಶೇಷ ಗ್ರಂಥಾಲಯದ ಸ್ಥಾಪನೆಗಾಗಿ, ಯುಕ್ತ ಹಾಗೂ ಆನುಷಂಗಿಕವೆಂದು ಪ್ರಾಧಿಕಾರವು ಅಭಿಪ್ರಾಯಪಡುವಂಥ ಇತರ ಯಾವುದೇ ವಿಷಯ;

(ಎಂ) ಪ್ರಾಧಿಕಾರದ ಪ್ರಾದೇಶಿಕ ಪರಿಮಿತಿಯೊಳಗಿನ ಐತಿಹಾಸಿಕ ಮತ್ತು ಪಾರಂಪರಿಕ ಸ್ಥಳಗಳಲ್ಲಿ ಮಣ್ಣಿನಲ್ಲಿ ಹೂತು ಹೋಗಿವೆ ಎಂದು ನಂಬಲಾದ ಪ್ರಾಚೀನ ಸ್ಮಾರಕಗಳು ಯಾವುದಾದರೂ ಇದ್ದರೆ, ಅವುಗಳನ್ನು ಭೂಮಿಯಿಂದ ತೆಗೆಯುವುದಕ್ಕಾಗಿ ಉತ್ಖನನ ಮತ್ತು ಪುರಾತತ್ವದ ಸ್ವರೂಪದ ಅನ್ವೇಷಣೆ ಕಾರ್ಯಗಳನ್ನು ಕೈಗೆತ್ತಿಕೊಳ್ಳುವುದು.

(ಎನ್) ಅಭಿವೃದ್ಧಿ ಯೋಜನೆಯ ಭೌಗೋಳಿಕ ಪ್ರದೇಶದಲ್ಲಿ ಈಗಿರುವ ಮತೀಯ ಸಂಸ್ಥೆಗಳೊಂದಿಗೆ, ಅವು ಅಭಿವೃದ್ಧಿ ಯೋನೆಯ ಸ್ಕೀಮಿಗೆ ಸರಿಹೊಂದುವವಷ್ಟರತನಕ ಅವುಗಳನ್ನು ಮುಂದುವರಿಸಲು ಅನುಮತಿಸಬಹುದಾದ ಅಂಥ ಹೊಂದಾಣಿಕೆಗಳು ಮತ್ತು ಕರಾರುಗಳನ್ನು ಮಾಡಿಕೊಳ್ಳುವುದು:

ಪರಂತು, ಈ ಅಧಿನಿಯಮದಲ್ಲಿ ಇರುವುದು ಯಾವುದೂ, ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ, 1958ರ (1958ರ ಕೇಂದ್ರ ಅಧಿನಿಯಮ ಸಂಖ್ಯೆ: 24) ಉಪಬಂಧಗಳನ್ನು ಅಧ್ಯಾರೋಹಿಸುತ್ತದೆಂದು ಭಾವಿಸತಕ್ಕದ್ದಲ್ಲ.

(2) (1)ನೇ ಉಪಪ್ರಕರಣದಡಿ ಸಿದ್ಧಪಡಿಸಲಾದ ಅಭಿವೃದ್ಧಿ ಯೋಜನೆಯನ್ನು, ಆಯುಕ್ತನು ಅನುಮೋದನೆಗಾಗಿ ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು. ರಾಜ್ಯ ಸರ್ಕಾರವು, ಮಾರ್ಪಾಟುಗಳ ಸಹಿತವಾಗಿ ಅಥವಾ ಯಾವುವೇ ಮಾರ್ಪಾಟುಗಳಿಲ್ಲದೆ ಯೋಜನೆಯನ್ನು ಅನುಮೋದಿಸಬಹುದು.

(3) (2)ನೇ ಉಪ ಪ್ರಕರಣದಡಿ ಅಭಿವೃದ್ಧಿ ಯೋಜನೆಯನ್ನು ಅನುಮೋದಿಸಿದ ತರುವಾಯ, ರಾಜ್ಯ ಸರ್ಕಾರವು ಪ್ರಾಧಿಕಾರದ ಶಿಪಾರಸುಗಳ ಮೇಲೆ ಕಾಲ ಕಾಲಕ್ಕೆ ತಾನು ಅವಶ್ಯಕವೆಂದು ಭಾವಿಸುವಂಥ ಮಾರ್ಪಾಟುಗಳನ್ನು ಯೋಜನೆಯಲ್ಲಿ ಮಾಡಬಹುದು.

(4) ಈ ಪ್ರಕರಣದಡಿ, ರಾಜ್ಯ ಸರ್ಕಾರವು ಅನುಮೋದಿಸಿದ ಅಭಿವೃದ್ಧಿ ಯೋಜನೆಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಕಾಮಗಾರಿಗಳನ್ನು ಕೈಗೊಳ್ಳುವ ಮತ್ತು ವೆಚ್ಚವನ್ನು ವಹಿಸುವ ಅಧಿಕಾರವನ್ನು ಪ್ರಾಧಿಕಾರವು ಹೊಂದಿರತಕ್ಕದ್ದು.

**21. ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ನಿರ್ವಹಣೆ.–** ರಾಜ್ಯ ಸರ್ಕಾರವು, ಪ್ರಾಧಿಕಾರದ ಶಿಫಾರಸುಗಳ ಮೇಲೆ ಅಥವಾ ಅನ್ಯಥಾ, ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ನಿರ್ವಹಣೆಗಾಗಿ ಯಾವ ರೀತಿಯಲ್ಲಿ, ಪಾರಂಪರಿಕ ತಾಣಗಳು ಸೇರಿದಂತೆ, ಪ್ರಾಧಿಕಾರದ ಸ್ವತ್ತುಗಳನ್ನು ಬಳಸಿಕೊಳ್ಳಬಹುದು ಎಂಬ ರೀತಿಯನ್ನು, ಪಟ್ಟಣಕ್ಕೆ ಬರುವ ಯಾತ್ರಾರ್ಥಿಗಳು, ಪ್ರವಾಸಿಗಳು ಮತ್ತು ಇತರ ಸಂದರ್ಶಕರು ಬಳಸಿಕೊಳ್ಳಬಹುದಾದ ಹಲವಾರು ಸೌಲಭ್ಯಗಳಿಗಾಗಿ ಅವರಿಂದ ವಸೂಲು ಮಾಡಬಹುದಾದ ದರಗಳು, ಶುಲ್ಕಗಳು ಅಥವಾ ಇತರ ವೆಚ್ಚಗಳನ್ನು ಮತ್ತು ಪರಂಪರೆಯ ತಾಣಗಳ ಆವರಣಗಳಿಂದ ಯುಕ್ತವೆನಿಸಬಹುದಾದ ಅಂಥ ಇನ್ನಿತರ ವಿಷಯಗಳನ್ನು, ಭೂ ಕಂದಾಯದ ಬಾಕಿಯಂತೆ ಬಾಡಿಗೆ ಅಥವಾ ನಷ್ಟ ಪರಿಹಾರವನ್ನು ವಸೂಲು ಮಾಡುವ ಅಧಿಕಾರ ಇತ್ಯಾದಿಗಳಿಗಾಗಿ ನಿಯಮಗಳ ಮೂಲಕ ಉಪಬಂಧ ಕಲ್ಪಿಸತಕ್ಕದ್ದು.

**22. ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರದ ಅಧಿಕಾರಗಳ ಪ್ರತ್ಯಾಯೋಜನೆ.–** ಕರ್ನಾಟಕ ಪ್ರಾಚೀನ ಐತಿಹಾಸಿಕ ಸ್ಮಾರಕಗಳು ಹಾಗೂ ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ, 1961ರಲ್ಲಿ (1962ರ ಕರ್ನಾಟಕ ಅಧಿನಿಯಮ ಸಂಖ್ಯೆ 7) ಏನೇ ಇದ್ದರೂ, ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ತಾನು ಚಲಾಯಿಸಬಹುದಾದ ಯಾವುದೇ ಅಧಿಕಾರಗಳನ್ನು ಪ್ರಾಧಿಕಾರಕ್ಕೆ ಪ್ರತ್ಯಾಯೋಜಿಸಬಹುದು ಮತ್ತು ಇಂತಹ ಅಧಿಸೂಚನೆಯನ್ನು ಹೊರಡಿಸಿದ ತರುವಾಯು, ಪ್ರಾಧಿಕಾರವು ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು ಮತ್ತು ಅಂತಹ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

**23. ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ನ್ನು ಪ್ರಾಧಿಕಾರದ ಆವರಣಗಳಿಗೆ ಅನ್ವಯಿಸುವುದು.–** (1) ರಾಜ್ಯ ಸರ್ಕಾರವು (2)ನೇ ಉಪಪ್ರಕರಣದ ಉಪಬಂಧಗಳಿಗೆ ಒಳಪಟ್ಟು, ಅಧಿಸೂಚನೆಯ ಮೂಲಕ, ಅಂಥ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ದಿನಾಂಕದಿಂದ, ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ನ್ನು (1974ರ ಕರ್ನಾಟಕ ಅಧಿನಿಯಮ 32) ಸಾರ್ವಜನಿಕ ಆವರಣಗಳಿಗೆ ಸಂಬಂಧಿಸಿ ಅನ್ವಯಿಸುವಂತೆ ಪ್ರಾಧಿಕಾರಕ್ಕೆ ಸೇರಿದ, ಅದರಲ್ಲಿ ನಿಹಿತವಾದ ಅಥವಾ ಅದು ಗುತ್ತಿಗೆಗೆ ತೆಗೆದುಕೊಂಡ ಆವರಣಕ್ಕೆ ಅನ್ವಯಿಸತಕ್ಕದ್ದೆಂದು ಉಪಬಂಧ ಕಲ್ಪಿಸಬಹುದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಅಧಿಸೂಚನೆಯನ್ನು ಹೊರಡಿಸಿದ ತರುವಾಯ, ಸದರಿ ಅಧಿನಿಯಮ ಮತ್ತು ಅದರಡಿ ರಚಿಸಿದ ನಿಯಮಗಳು, ಈ ಮುಂದಿನ ಮಾರ್ಪಾಡುಗಳೊಡನೆ ಪ್ರಾಧಿಕಾರಕ್ಕೆ ಸೇರಿದ ಆವರಣಗಳಿಗೆ ಅನ್ವಯಿಸತಕ್ಕದ್ದು, ಎಂದರೆ:–

(ಎ) ರಾಜ್ಯ ಸರ್ಕಾರವು, ತಾನು ಸೂಕ್ತವೆಂದು ಭಾವಿಸುವಚಿತೆ, ರಾಜ್ಯ ಸರ್ಕಾರದ ಅಥವಾ ಪ್ರಾಧಿಕಾರದ ಯಾವೊಬ್ಬ ಅಧಿಕಾರಿಯನ್ನು ಮೇಲ್ಕಂಡ ಅಧಿನಿಯಮದ ಉದ್ದೇಶಗಳಿಗಾಗಿ ಸಕ್ಷಮ ಅಧಿಕಾರಿಯೆಂದು ನೇಮಿಸಬಹುದು; ಮತ್ತು

(ಬಿ) ಆ ಅಧಿನಿಯಮದಲ್ಲಿ ಮತ್ತು ಅದರ ಅಡಿಯಲ್ಲಿ ರಚಿಸಿದ ಆ ನಿಯಮಗಳ ಅಡಿಯಲ್ಲಿ ಸಾರ್ವಜನಿಕ ಆವರಣಗಳಿಗೆ ಮಾಡಿದ ಉಲ್ಲೇಖಗಳು, ಪ್ರಾಧಿಕಾರದ ಆವರಣಗಳಿಗೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು ಮತ್ತು ಆ ಅಧಿನಿಯಮದ 6, 7, 8, 14, 15, 16 ಮತ್ತು 17ನೇ ಪ್ರಕರಣಗಳಲ್ಲಿ ರಾಜ್ಯ ಸರ್ಕಾರಕ್ಕೆ ಮಾಡಿದ ಉಲ್ಲೇಖಗಳನ್ನು ಪ್ರಾಧಿಕಾರಕ್ಕೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು.

**24. ಪ್ರವಾಸೋದ್ಯಮಕ್ಕೆ ಮತ್ತು ಯಾತ್ರೆ ಕೈಗೊಳ್ಳುವುದಕ್ಕೆ ಪ್ರಾಧಿಕಾರವು ಉತ್ತೇಜಿಸುವುದು.–** ಈ ಪಾರಂಪರಿಕ ತಾಣಗಳಿಗೆ ಸಾಕಷ್ಟು ಪ್ರಚಾರಗಳನ್ನು ನೀಡಲು ಪ್ರವಾಸೋದ್ಯಮ, ಸಾಂಸ್ಕೃತಿಕ, ಚಾರಿತ್ರಿಕ ಮತ್ತು ಯಾತ್ರಾ ಪ್ರಾಮುಖ್ಯತೆಯನ್ನು ಉತ್ತೇಜಿಸಲು ಪ್ರಾಧಿಕಾರವು ಕಾರ್ಯಕ್ರಮಗಳನ್ನು ಮತ್ತು ಕಾರ್ಯಚಟುವಟಿಕೆಗಳನ್ನು ವ್ಯವಸ್ಥೆ ಮಾಡಬಹುದು. ಅಂಥ ಕಾರ್ಯಕ್ರಮಗಳು ಈ ಮುಂದಿನವುಗಳನ್ನು ಒಳಗೊಂಡಿರತಕ್ಕದ್ದು,–

(i) ನಾಡಪ್ರಭು ಕೆಂಪೇಗೌಡ ಉತ್ಸವ;

(ii) ಸಾಹಿತ್ಯೋತ್ಸವ;

(iii) ಕಲಾ ಪ್ರದರ್ಶನಗಳು ಮತ್ತು ಮಾರಾಟಗಳು;

(iv) ಸಮ್ಮೇಳನಗಳು, ವಿಚಾರಗೋಷ್ಠಿಗಳು, ಕಾರ್ಯಾಗಾರಗಳು;ಮತ್ತು

(v) ವಾರ್ಷಿಕ ಜಾತ್ರೆಗಳು ಮತ್ತು ವಿಶೇಷ ಸ್ವರೂಪದ ಹಬ್ಬಗಳು.

**25. ಅಧಿಕಾರಗಳ ಪ್ರತ್ಯಾಯೋಜನೆ.–** (1) 40ನೇ ಪ್ರಕರಣದ ಅಡಿಯಲ್ಲಿ ನಿಯಮಗಳನ್ನು ರಚಿಸುವ ಅಧಿಕಾರವನ್ನು ಹೊರತುಪಡಿಸಿ, ರಾಜ್ಯ ಸರ್ಕಾರವು, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ತನಗೆ ಪ್ರದತ್ತವಾದ ಯಾವುದೇ ಅಧಿಕಾರಗಳನ್ನು ಅಧಿಕಾರಗಳನ್ನು ಅಧಿಸೂಚನೆಯ ಮೂಲಕ ಯಾವುದೇ ಇತರ ಪ್ರಾಧಿಕಾರಕ್ಕೆ ಪ್ರತ್ಯಾಯೋಜಿಸಬಹುದು.

(2) 41ನೇ ಪ್ರಕರಣದ ಅಡಿಯಲ್ಲಿ ವಿನಿಯಮಗಳನ್ನು ರಚಿಸುವ ಅಧಿಕಾರವನ್ನು ಹೊರತುಪಡಿಸಿ, ಪ್ರಾಧಿಕಾರವು, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ತನಗೆ ಪ್ರದತ್ತವಾದ ಯಾವುದೇ ಅಧಿಕಾರಗಳನ್ನು ವಿನಿಯಮಗಳ ಮೂಲಕ, ಆಯುಕ್ತನಿಗೆ ಅಥವಾ ಪ್ರಾಧಿಕಾರದ ಇತರ ಅಧಿಕಾರಿಗಳಿಗೆ ಪ್ರತ್ಯಾಯೋಜಿಸಬಹುದು.

## ಅಧ್ಯಾಯ – IV

## ಹಣಕಾಸು ಮತ್ತು ಸ್ವತ್ತು

**26. ಪ್ರಾಧಿಕಾರದ ನಿಧಿಗಳು.–** (1) ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ನಿಧಿಯೆಂದು ಕರೆಯಲಾಗುವ ಒಂದು ನಿಧಿಯು ಇರತಕ್ಕದ್ದು.

(2) ಸದರಿ ನಿಧಿಗೆ,–

(i) ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಯಾವುದೇ ಸ್ಥಳೀಯ ಪ್ರಾಧಿಕಾರ ಅಥವಾ ನಿಗಮಿತವಾದ ಇಲ್ಲವೇ ನಿಗಮಿತವಲ್ಲದ ಯಾವುದೇ ನಿಕಾಯ ಅಥವಾ ಯಾವೊಬ್ಬ ವ್ಯಕ್ತಿಯು ನೀಡಿದ ಎಲ್ಲ ಅನುದಾನಗಳು, ಧನ ಸಹಾಯ, ದೇಣಿಗೆಗಳು ಮತ್ತು ದಾನಗಳನ್ನು;

(ii) ಪ್ರಾಧಿಕಾರವು ಸಾಲ ಪಡೆದ ಮೊಬಲಗನ್ನು ; ಮತ್ತು

(iii) ಯಾವುದೇ ಮೂಲದಿಂದಾಗಲಿ, ಪ್ರಾಧಿಕಾರವು ಅಥವಾ ಪ್ರಾಧಿಕಾರದ ಪರವಾಗಿ ಸ್ವೀಕರಿಸಿದ ಇತರ ಎಲ್ಲಾ ಮೊತ್ತಗಳನ್ನು,

– ಜಮೆ ಮಾಡತಕ್ಕದ್ದು;

(3) ರಾಜ್ಯ ಸರ್ಕಾರವು, ಅನ್ಯಥಾ ನಿರ್ದೇಶಿಸಿದ ಹೊರತು, ನಿಧಿಗೆ ಜಮೆ ಮಾಡಲಾದ ಎಲ್ಲ ಹಣವನ್ನು ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಅಥವಾ ರಾಜ್ಯ ಸರ್ಕಾರದ ಖಜಾನೆಯಲ್ಲಿ ಇರಿಸತಕ್ಕದ್ದು.

(4) ಪ್ರಾಧಿಕಾರದ ಆಯುಕ್ತನಿಗೆ ಮತ್ತು ಇತರ ಅಧಿಕಾರಿಗಳಿಗೆ ಮತ್ತು ನೌಕರರಿಗೆ ಸಂದಾಯ ಮಾಡಬೇಕಾದ ವೇತನಗಳು, ಭತ್ಯೆಗಳು ಮತ್ತು ನಿವೃತ್ತಿ ವೇತನ ಏನಾದರೂ ಇದ್ದಲ್ಲಿ, ಅದನ್ನೂ ಒಳಗೊಂಡಂತೆ, ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

**27. ನಿಧಿಯ ಬಳಕೆ.–** ನಿಧಿಯನ್ನು ಮತ್ತು ಪ್ರಾಧಿಕಾರವು ಹೊಂದಿರುವ ಅಥವಾ ಅದರಲ್ಲಿ ನಿಹಿತವಾಗಿರುವ ಎಲ್ಲ ಸ್ವತ್ತನ್ನು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ಬಳಸಿಕೊಳ್ಳತಕ್ಕದ್ದು.

**28. ಸರ್ಕಾರದಿಂದ ಅನುದಾನ.–** ಪ್ರಾಧಿಕಾರವು ತನ್ನದೇ ಸಂಪನ್ಮೂಲಗಳಿಂದ ಸ್ವಯಂ ನಿರ್ವಹಣೆ ಮಾಡಿಕೊಳ್ಳುವ ಹಂತವನ್ನು ತಲುಪುವವರೆಗೆ ಅದರ ಆಡಳಿತಾತ್ಮಕ ವೆಚ್ಚಗಳಿಗೆ ಸಮನಾದ ಮೊತ್ತವನ್ನು ರಾಜ್ಯ ಸರ್ಕಾರವು ಪ್ರತಿ ವರ್ಷವೂ ಪ್ರಾಧಿಕಾರಕ್ಕೆ ಅನುದಾನದ ರೂಪದಲ್ಲಿ ನೀಡತಕ್ಕದ್ದು ಮತ್ತು ಕಾಲಕಾಲಕ್ಕೆ ಪಾರಂಪರಿಕ ಪ್ರದೇಶಗಳ ಅಭಿವೃದ್ಧಿಗೆ ಸಹಾಯಾನುದಾನ ನೀಡತಕ್ಕದ್ದು.

**29. ಪ್ರಾಧಿಕಾರದ ಆಯವ್ಯಯ.–** (1) ನಿಯಮಿಸಬಹುದಾದ ಅಂಥ ದಿನಾಂಕಕ್ಕೆ ಮೊದಲು ಮತ್ತು ಅಂತಹ ನಮೂನೆಯಲ್ಲಿ ಮುಂಬರುವ ಏಪ್ರಿಲ್ ಒಂದನೆಯ ದಿನಾಂಕದಂದು ಪ್ರಾರಂಭವಾಗುವ ಹಣಕಾಸು ವರ್ಷಕ್ಕಾಗಿ ಪ್ರಾಧಿಕಾರವು, ತನ್ನ ಆದಾಯ ಮತ್ತು ವೆಚ್ಚದ ಆಯವ್ಯಯ ಅಂದಾಜನ್ನು ಸಿದ್ಧಪಡಿಸತಕ್ಕದ್ದು ಮತ್ತು ರಾಜ್ಯ ಸರ್ಕಾರಕ್ಕೆ ಮಂಜೂರಾತಿಗಾಗಿ ಕಳುಹಿಸತಕ್ಕದ್ದು. ಅವಶ್ಯವಾದರೆ, ಪ್ರಾಧಿಕಾರವು ಯಾವುದೇ ಹಣಕಾಸು ವರ್ಷದ ಅವಧಿಯಲ್ಲಿ ಪೂರಕ ಆಯವ್ಯಯ ಅಂದಾಜುಗಳನ್ನು ಸಹ ಸಿದ್ಧಪಡಿಸಬಹುದು.

(2) ರಾಜ್ಯ ಸರ್ಕಾರವು, ಈ ಆಯವ್ಯಯ ಅಂದಾಜುಗಳನ್ನು ಮತ್ತು ಪೂರಕ ಬಜೆಟ್ ಅಂದಾಜುಗಳನ್ನು, ಅವುಗಳಲ್ಲಿ ಮಾರ್ಪಾಡುಗಳನ್ನು ಮಾಡಿ ಅಥವಾ ಮಾಡದೇ ಅನುಮೋದಿಸಬಹುದು.

(3) ಅತ್ಯಂತ ತುರ್ತು ಸಂದರ್ಭಗಳಲ್ಲಿ, ಆಯುಕ್ತನು, ಒಂದು ಹಣಕಾಸು ವರ್ಷದಲ್ಲಿ ಐದು ಲಕ್ಷ ರೂಪಾಯಿಗಳಿಗೆ ಮೀರದಂತೆ ವೆಚ್ಚವನ್ನು (2)ನೇ ಉಪಪ್ರಕರಣದಡಿ ರಾಜ್ಯ ಸರ್ಕಾರವು ಅನುಮೋದಿಸಿದ ವಾರ್ಷಿಕ ಅಥವಾ ಪೂರಕ ಆಯವ್ಯಯ ಅಂದಾಜಿನಲ್ಲಿ ಸೇರಿಸಿಲ್ಲದಿದ್ದಾಗ್ಯೂ ಮಾಡಲು ಸಕ್ಷಮನಾಗಿರತಕ್ಕದ್ದು.

(4) ಆಯುಕ್ತನು ಒಂದು ಬಾರಿಗೆ ಒಂದು ಲಕ್ಷ ರೂಪಾಯಿಗಳ ಗರಿಷ್ಠ ಮಿತಿಗೆ ಒಳಪಟ್ಟು, ವೆಚ್ಚದ ಒಂದು ಘಟಕದಿಂದ ಇನ್ನೊಂದು ಘಟಕಕ್ಕೆ ನಿಧಿಗಳ ಪುನರ್‌ವಿನಿಯೋಗ ಮಾಡುವ ಅಧಿಕಾರವನ್ನೂ ಸಹ ಹೊಂದಿರತಕ್ಕದ್ದು.

**30. ಲೆಕ್ಕ ಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ಆಯುಕ್ತನು, ನಿಯಮಿಸಬಹುದಾದ ಅಂಥ ಲೆಕ್ಕಪತ್ರಗಳ ಪುಸ್ತಕಗಳನ್ನು ಮತ್ತು ಇತರ ರಿಜಿಸ್ಟರುಗಳನ್ನು ನಿರ್ವಹಿಸುವಂತೆ ಮಾಡತಕ್ಕದ್ದು ಮತ್ತು ನಿಯಮಿಸಲಾದ ವಿಧಾನದಲ್ಲಿ ವಾರ್ಷಿಕ ಲೆಕ್ಕಪತ್ರಗಳ ತಃಖ್ತೆಗಳನ್ನು ತಯಾರಿಸತಕ್ಕದ್ದು.

(2) ಪ್ರಾಧಿಕಾರದ ಹಣಕಾಸು ವರ್ಷವು, ಪ್ರತಿ ಕ್ಯಾಲೆಂಡರ್ ವರ್ಷದ ಏಪ್ರಿಲ್ ಒಂದನೆಯ ದಿನಾಂಕದಂದು ಪ್ರಾರಂಭವಾಗತಕ್ಕದ್ದು ಮತ್ತು ಮುಂಬರುವ ಕ್ಯಾಲೆಂಡರ್ ವರ್ಷದ ಮಾರ್ಚಿ 31ನೇ ದಿನದಂದು ಕೊನೆಗೊಳ್ಳತಕ್ಕದ್ದು.

(3) ಪ್ರಾಧಿಕಾರದ ಲೆಕ್ಕಪತ್ರಗಳನ್ನು ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರಗಳ ಇಲಾಖೆಯ ನಿಯಂತ್ರಣಾಧಿಕಾರಿಯು ವಾರ್ಷಿಕವಾಗಿ ಲೆಕ್ಕಪರಿಶೋಧನೆ ನಡೆಸತಕ್ಕದ್ದು. ಪ್ರಾಧಿಕಾರ ಅಥವಾ ರಾಜ್ಯ ಸರ್ಕಾರವು ಸಮವರ್ತಿ ಮತ್ತು ವಿಶೇಷ ಲೆಕ್ಕಪರಿಶೋಧನೆಗಾಗಿಯೂ ಸಹ ಆದೇಶಿಸಬಹುದು.

(4) ಲೆಕ್ಕಪರಿಶೋಧಕನು, ಲೆಕ್ಕಪರಿಶೋಧನೆಯ ಉದ್ದೇಶಗಳಿಗಾಗಿ, ಪ್ರಾಧಿಕಾರದ ಎಲ್ಲ ಲೆಕ್ಕಪತ್ರಗಳನ್ನು ಮತ್ತು ಇತರ ದಾಖಲೆಗಳನ್ನು ನೋಡುವ ಅವಕಾಶವನ್ನು ಹೊಂದಿರತಕ್ಕದ್ದು.

(5) ಪ್ರಾಧಿಕಾರವು, ಲೆಕ್ಕಪತ್ರಗಳ ವಾರ್ಷಿಕ ತಃಖ್ತೆಯನ್ನು ಮತ್ತು ಲೆಕ್ಕಪರಿಶೋಧಕನ ವರದಿಯನ್ನು ಸ್ವೀಕರಿಸಿದ ತರುವಾಯ, ಸಾಧ್ಯವಾಗಬಹುದಾದಷ್ಟು ಬೇಗನೆ, ತನ್ನ ಸಭೆಯಲ್ಲಿ ಅದನ್ನು ಪರಿಶೀಲಿಸತಕ್ಕದ್ದು ಮತ್ತು ವಾರ್ಷಿಕ ಲೆಕ್ಕಪತ್ರಗಳ ತಃಖ್ತೆಗಳ ಹಾಗೂ ಲೆಕ್ಕಪರಿಶೋಧಕನ ವರದಿಯ ಪ್ರತಿಯನ್ನು, ಲೆಕ್ಕಪರಿಶೋಧಕನು ಮಾಡಿದ ಟೀಕೆಗಳೇನಾದರೂ ಇದ್ದಲ್ಲಿ, ಅದಕ್ಕೆ ನೀಡಿದ ತನ್ನ ವಿವರಣೆಯನ್ನು ಮತ್ತು ಲೆಕ್ಕಪರಿಶೋಧಕನು ಸೂಚಿಸಿದ ಅಕ್ರಮತೆಗಳು ಅಥವಾ ಲೋಪದೋಷಗಳೇನಾದರೂ ಇದ್ದಲ್ಲಿ, ಅವುಗಳ ಪರಿಹಾರೋಪಾಯಕ್ಕಾಗಿ ಪ್ರಾಧಿಕಾರವು ಕೈಗೊಂಡ ಕ್ರಮದ ವಿವರಣೆಯೊಂದಿಗೆ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

(6) ರಾಜ್ಯ ಸರ್ಕಾರವು, ಲೆಕ್ಕ ಪರಿಶೋಧಕನ ವರದಿಯನ್ನು ಮತ್ತು (5)ನೇ ಉಪಪ್ರಕರಣದ ಅಡಿಯಲ್ಲಿ ಅದಕ್ಕೆ ಸಲ್ಲಿಸಲಾದ ಇತರ ದಸ್ತಾವೇಜುಗಳನ್ನು ಪರಿಶೀಲಿಸಿದ ನಂತರ, ಪ್ರಾಧಿಕಾರಕ್ಕೆ ಅದು ಸೂಕ್ತವೆಂದು ಭಾವಿಸುವ ಅಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ಪ್ರಾಧಿಕಾರವು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

**31. ವರದಿಗಳು.–** (1) ಪ್ರಾಧಿಕಾರವು, ಪ್ರತಿಯೊಂದು ಹಣಕಾಸು ವರ್ಷಕ್ಕಾಗಿ, ತನ್ನ ಕಾರ್ಯನಿರ್ವಹಣೆ ಬಗ್ಗೆ ವಾರ್ಷಿಕ ವರದಿಯೊಂದನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(2) ರಾಜ್ಯ ಸರ್ಕಾರವು, ವಾರ್ಷಿಕ ವರದಿಯನ್ನು ಮತ್ತು ಲೆಕ್ಕ ಪರಿಶೋಧನೆ ವರದಿಯನ್ನು ಅದರ ಅನುಸರಣಾ ವರದಿ ಸಹಿತ ರಾಜ್ಯ ವಿಧಾನ ಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

## ಅಧ್ಯಾಯ V
## ಸಂಕೀರ್ಣ

**32. ಪ್ರಾಧಿಕಾರವು ಅದರ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಭೂಮಿಯನ್ನು ಮಾರಾಟ ಮಾಡಕೂಡದು.–** ಪ್ರಾಧಿಕಾರವು, ರಾಜ್ಯ ಸರ್ಕಾರದ ಪೂರ್ವಾನುಮೋದನೆ ಪಡೆಯದೆ, ಯಾವುದೇ ಉದ್ದೇಶಕ್ಕಾಗಿ ಮತ್ತು ಯಾವೊಬ್ಬ ವ್ಯಕ್ತಿಗೆ ಅದರ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಭೂಮಿಯನ್ನು ಮಾರಾಟ ಮಾಡತಕ್ಕದ್ದಲ್ಲ.

**33. ಕೆಲವು ವ್ಯಕ್ತಿಗಳು ಲೋಕನೌಕರರಾಗಿರತಕ್ಕದ್ದು.–** ಪ್ರಾಧಿಕಾರದ ಎಲ್ಲ ಸದಸ್ಯರು, ಅಧಿಕಾರಿಗಳು ಮತ್ತು ನೌಕರರನ್ನು, ಅವರು ಈ ಅಧಿನಿಯಮದ ಯಾವುವೇ ಉಪಬಂಧಗಳ ಅನುಸರಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವಾಗ ಅಥವಾ ಕಾರ್ಯ ನಿರ್ವಹಿಸುತ್ತಿರುವರೆಂದು ತಾತ್ಪರ್ಯವಾದಾಗ ಅವರನ್ನು ಭಾರತ ದಂಡ ಸಂಹಿತೆಯ 1860ರ (1860ರ ಕೇಂದ್ರ ಅಧಿನಿಯಮ 45) 21ನೇ ಪ್ರಕರಣದ ಅರ್ಥವ್ಯಾಪ್ತಿಯೊಳಗೆ ಲೋಕನೌಕರರು ಎಂಬುದಾಗಿ ಭಾವಿಸತಕ್ಕದ್ದು.

**34. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ.–** ಈ ಅಧಿನಿಯಮದ ಅಡಿಯಲ್ಲಿ ಸದ್ಭಾವನೆಯಿಂದ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿದ ಯಾವುದೇ ಕೃತ್ಯಕ್ಕಾಗಿ, ಯಾವೊಬ್ಬ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಪ್ರಾಸಿಕ್ಯೂಷನ್ ಅಥವಾ ಇತರೆ ಕಾನೂನು ವ್ಯವಹರಣೆಗಳನ್ನು ಹೂಡತಕ್ಕದ್ದಲ್ಲ.

**35. ಕರ್ತವ್ಯ ನಿರ್ವಹಣೆಯಲ್ಲಿ ಲೋಪ.–** (1) ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ವಿಧಿಸಲಾದ ಯಾವುದೇ ಕರ್ತವ್ಯದ ನಿರ್ವಹಣೆಯಲ್ಲಿ ಪ್ರಾಧಿಕಾರವು ಲೋಪವನ್ನು ಎಸಗಿದೆ ಎಂದು ರಾಜ್ಯ ಸರ್ಕಾರಕ್ಕೆ ಮನವರಿಕೆಯಾದರೆ, ಆ ಕರ್ತವ್ಯದ ನಿರ್ವಹಣೆಗಾಗಿ ಅದು ಅವಧಿಯನ್ನು ನಿಗದಿಪಡಿಸಬಹುದು.

(2) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ, ಪ್ರಾಧಿಕಾರದ ಕರ್ತವ್ಯ ನಿರ್ವಹಣೆಗಾಗಿ ಹಾಗೆ ನಿಗದಿಪಡಿಸಿದ ಅವಧಿಯೊಳಗೆ ಅಂಥ ಕರ್ತವ್ಯ ನಿರ್ವಹಣೆ ಮಾಡುವಲ್ಲಿ ಅದು ವಿಫಲವಾದರೆ ಅಥವಾ ನಿರ್ಲಕ್ಷ್ಯ ತೋರಿದರೆ 3ನೇ ಪ್ರಕರಣದಲ್ಲಿ ಏನೇ ಇದ್ದಾಗ್ಯೂ, ಪ್ರಾಧಿಕಾರವನ್ನು ರದ್ದುಗೊಳಿಸುವುದು ಮತ್ತು ಅದನ್ನು ನಿಯಮಿಸಿದ ರೀತಿಯಲ್ಲಿ ಪುನ: ರಚಿಸುವುದು ಸರ್ಕಾರಕ್ಕೆ ಕಾನೂನು ಬದ್ಧವಾಗಿರತಕ್ಕದ್ದು.

(3) ಪ್ರಾಧಿಕಾರವನ್ನು ರದ್ದುಗೊಳಿಸಿದ ತರುವಾಯ ಮತ್ತು ಅದನ್ನು ಪುನಾರಚಿಸುವವರೆಗೆ ಈ ಅಧಿನಿಯಮದ ಅಡಿಯಲ್ಲಿ ಪ್ರಾಧಿಕಾರದ ಅಧಿಕಾರಿಗಳು, ಕರ್ತವ್ಯಗಳು ಮತ್ತು ಪ್ರಕಾರ್ಯಗಳನ್ನು ರಾಜ್ಯ ಸರ್ಕಾರ ಅಥವಾ ಈ ಉದ್ದೇಶಕ್ಕಾಗಿ ರಾಜ್ಯ ಸರ್ಕಾರವು ನೇಮಕ ಮಾಡಬಹುದಾದ ಅಂಥ ಅಧಿಕಾರಿ ಅಥವಾ ಅಧಿಕಾರಿಗಳು ನಿರ್ವಹಿಸತಕ್ಕದ್ದು.

**36. ಪ್ರಾಧಿಕಾರದ ವಿಘಟನೆ.–** (1) ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಆ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ದಿನಾಂಕದಿಂದ ಜಾರಿಗೆ ಬರುವಂತೆ ಪ್ರಾಧಿಕಾರವು ವಿಘಟಿತವಾಗತಕ್ಕದ್ದೆಂದು ಘೋಷಿಸಬಹುದು:

ಪರಂತು, ಆ ಪರಿಣಾಮಕ್ಕೆ ನಿರ್ಣಯವನ್ನು ರಾಜ್ಯ ವಿಧಾನ ಮಂಡಲದ ಉಭಯ ಸದನಗಳ ಮುಂದೆ ಮಂಡಿಸಿ ಅವುಗಳು ಅದನ್ನು ಅನುಮೋದಿಸಿದ ಹೊರತು, ರಾಜ್ಯ ಸರ್ಕಾರವು ಅಂಥ ಯಾವುದೇ ಘೋಷಣೆಯನ್ನು ಮಾಡತಕ್ಕದ್ದಲ್ಲ.

(2) (1)ನೇ ಉಪ ಪ್ರಕರಣದ ಅಡಿಯಲ್ಲಿನ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಿದ ದಿನಾಂಕದಿಂದ ಪರಿಣಾಮಕಾರಿಯಾಗುವಂತೆ,–

(i) ಪ್ರಾಧಿಕಾರದಲ್ಲಿ ನಿಹಿತವಾದ ಮತ್ತು ಅದರಿಂದ ವಸೂಲಾಗತಕ್ಕ ಎಲ್ಲಾ ಸ್ವತ್ತುಗಳು, ನಿಧಿಗಳು ಮತ್ತು ಬಾಕಿಗಳು ರಾಜ್ಯ ಸರ್ಕಾರದಲ್ಲಿ ನಿಹಿತವಾಗತಕ್ಕದ್ದು ಮತ್ತು ಅದು ವಸೂಲಿ ಮಾಡತಕ್ಕದ್ದು.

(ii) ಪ್ರಾಧಿಕಾರದ ಮೇಲೆ ನಿರ್ಬಂಧನೀಯವಾಗುವ ಎಲ್ಲಾ ಹೊಣೆಗಾರಿಕೆಗಳು, ರಾಜ್ಯ ಸರ್ಕಾರದಲ್ಲಿ ನಿಹಿತವಾದ ಮತ್ತು ಅದು ವಸೂಲಿ ಮಾಡುವ ಸ್ವತ್ತು, ನಿಧಿ ಮತ್ತು ಬಾಕಿಗಳ ವ್ಯಾಪ್ತಿಯಷ್ಟರಮಟ್ಟಿಗೆ, ರಾಜ್ಯ ಸರ್ಕಾರಕ್ಕೆ ನಿರ್ಬಂಧನೀಯವಾಗಿರತಕ್ಕದ್ದು.

**37. ರಾಜ್ಯ ಸರ್ಕಾರದ ನಿಯಂತ್ರಣ.–** (1) ರಾಜ್ಯ ಸರ್ಕಾರವು, ಪ್ರಾಧಿಕಾರದ ಎಲ್ಲ ಕಾರ್ಯಚಟುವಟಿಕೆಗಳು ಮತ್ತು ವ್ಯವಹಾರಗಳ ಮೇಲೆ ಸಾಮಾನ್ಯ ಆಡಳಿತಾತ್ಮಕ ನಿಯಂತ್ರಣ ಮತ್ತು ಪರಿವೀಕ್ಷಣೆ ಹೊಂದಿರತಕ್ಕದ್ದು.

(2) ರಾಜ್ಯ ಸರ್ಕಾರವು, ಪ್ರಾಧಿಕಾರದ, ಆಯುಕ್ತನ ಅಥವಾ ಪ್ರಾಧಿಕಾರದ ಅಧೀನದ ಯಾವೊಬ್ಬ ಅಧಿಕಾರಿಯ ಯಾವುವೇ ವ್ಯವಹರಣೆಗಳ ದಾಖಲೆಗಳನ್ನು, ಅಂಥ ವ್ಯವಹರಣೆಗಳ ಯಥಾರ್ಥತೆ, ಕಾನೂನು ಬದ್ಧತೆ ಅಥವಾ ಔಚಿತ್ಯಗಳ ಬಗ್ಗೆ ಅದು ಸಮಾಧಾನ ಹೊಂದುವ ಉದ್ದೇಶಕ್ಕಾಗಿ ತರಿಸಿಕೊಳ್ಳಬಹುದು ಮತ್ತು ಅವುಗಳ ಬಗ್ಗೆ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿ ಅಂಥ ಆದೇಶವನ್ನು ಹೊರಡಿಸಬಹುದು:

ಪರಂತು, ಸರ್ಕಾರದ ಆದೇಶದಿಂದ ಬಾಧಿತರಾದ ವ್ಯಕ್ತಿಗಳಿಗೆ ಯುಕ್ತ ಅವಕಾಶವನ್ನು ನೀಡದ ಹೊರತು, ರಾಜ್ಯ ಸರ್ಕಾರವು ಯಾವುದೇ ಆದೇಶವನ್ನು ಹೊರಡಿಸತಕ್ಕದ್ದಲ್ಲ ಅಥವಾ ಮಾರ್ಪಡಿಸತಕ್ಕದ್ದಲ್ಲ ಅಥವಾ ರದ್ದುಪಡಿಸತಕ್ಕದ್ದಲ್ಲ.

**38. ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರ.–** ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ, ಅದು ಅವಶ್ಯಕ ಮತ್ತು ಸಮಯೋಚಿತವೆಂದು ಅಭಿಪ್ರಾಯಪಡುವಂಥ ನಿರ್ದೇಶನಗಳನ್ನು ಪ್ರಾಧಿಕಾರಕ್ಕೆ ಕೊಡಬಹುದು ಮತ್ತು ಅಂಥ ನಿರ್ದೇಶನಗಳನ್ನು ಪಾಲಿಸುವುದು ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು.

**39. ತೊಂದರೆಗಳ ನಿವಾರಣೆ.–** ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೆ ತರುವಲ್ಲಿ, ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಆ ತೊಂದರೆಯ ನಿವಾರಣೆಗಾಗಿ, ತಾನು ಅವಶ್ಯಕ ಮತ್ತು ಸಮಯೋಚಿತವೆಂದು ಕಂಡುಬರುವಂತೆ, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಂಥ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳು ಮುಕ್ತಾಯವಾದ ಮೇಲೆ ಅಂಥ ಯಾವುದೇ ಅಧಿಸೂಚನೆಯನ್ನು ಹೊರಡಿಸತಕ್ಕದ್ದಲ್ಲ.

**40. ನಿಯಮಗಳ ರಚನಾಧಿಕಾರ.–** (1) ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಲಾದ ಪ್ರತಿಯೊಂದು ನಿಯಮ ಅಥವಾ ಹೊರಡಿಸಲಾದ ಅಧಿಸೂಚನೆಯನ್ನು, ಅದನ್ನು ರಚಿಸಿದ ಅಥವಾ ಹೊರಡಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚಿನ ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನಗಳ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನದ ಮುಕ್ತಾಯಕ್ಕೆ ಮುಂಚೆ, ಆ ನಿಯಮ ಅಥವಾ ಅಧಿಸೂಚನೆಯ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳೂ ಒಪ್ಪಿದರೆ ಅಥವಾ ಆ ನಿಯಮ ಅಥವಾ ಅಧಿಸೂಚನೆಯನ್ನು ಮಾಡಕೂಡದೆಂದು ಎರಡೂ ಸದನಗಳೂ

ಒಪ್ಪಿದರೆ ಆ ನಿಯಮ ಅಥವಾ ಅಧಿಸೂಚನೆಯ ಆ ಮಾರ್ಪಾಟನ್ನು ಅಥವಾ ರದ್ದತಿಯು ಅಧಿಸೂಚಿಸಿದ ದಿನಾಂಕದಿಂದ ಸಂದರ್ಭಾನುಸಾರ ಅಂಥ ಮಾರ್ಪಾಟು ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗಿರತಕ್ಕದ್ದು ಅಥವಾ ಯಾವುದೇ ಪರಿಣಾಮವನ್ನು ಹೊಂದಿರತಕ್ಕದ್ದಲ್ಲ; ಆದಾಗ್ಯೂ ಅಂಥ ಯಾವುದೇ ಮಾರ್ಪಾಟು ಅಥವಾ ರದ್ದತಿಯು, ಆ ನಿಯಮ ಅಥವಾ ಅಧಿಸೂಚನೆಯ ಮೇರೆಗೆ ಹಿಂದೆ ಮಾಡಿದ ಯಾವುದೇ ಕೃತ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

**41. ವಿನಿಯಮಗಳ ರಚನಾಧಿಕಾರ.-** ಪ್ರಾಧಿಕಾರವು, ಈ ಅಧಿನಿಯಮದ ಉಪಬಂಧಗಳಿಗೆ ಮತ್ತು 40ನೇ ಪ್ರಕರಣದ ಅಡಿಯಲ್ಲಿ ಮಾಡಲಾದ ನಿಯಮಗಳಿಗೆ ಒಳಪಟ್ಟು ಮತ್ತು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ, ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕೆ ಅಧಿಸೂಚನೆಯ ಮೂಲಕ ವಿನಿಯಮಗಳನ್ನು ರಚಿಸಬಹುದು.

ಅನುಸೂಚಿ

[2ನೇ ಪ್ರಕರಣದ (ಎಫ್) ಮತ್ತು (ಜೆ) ಖಂಡ ನೋಡಿ]

ಪಾರಂಪರಿಕ ತಾಣಗಳು ಮತ್ತು ಸ್ಮಾರಕಗಳು

**ಬೆಂಗಳೂರು ನಗರ ಜಿಲ್ಲೆ:**

1. ಬೆಂಗಳೂರು ಕೋಟೆ;
2. ಗವಿಗಂಗಾಧರೇಶ್ವರ ದೇವಸ್ಥಾನ;
3. ಬಸವನಗುಡಿಯಲ್ಲಿ ದೊಡ್ಡ ಬಸವಣ್ಣ ಮತ್ತು ದೊಡ್ಡ ಗಣಪತಿ ದೇವಸ್ಥಾನ;
4. ಸೋಮೇಶ್ವರ ದೇವಸ್ಥಾನ, ಹಲಸೂರು;
5. ಕೋಟೆ ವೆಂಕಟರಮಣಸ್ವಾಮಿ ದೇವಾಲಯ; ಮತ್ತು
6. ಕೆಂಪೇಗೌಡ ಆಳ್ವಿಕೆಯ ಅವಧಿಯಲ್ಲಿನ ನಾಲ್ಕು ಕಾವಲು ಗೋಪುರಗಳು;
7. ಕೆಂಪೇಗೌಡ ವಸ್ತುಸಂಗ್ರಹಾಲಯ;
8. ಬೆಂಗಳೂರು ವಿಶ್ವವಿದ್ಯಾಲಯದ ಕೆಂಪೇಗೌಡ ಅಧ್ಯಯನ ಕೇಂದ್ರ;
9. ಧರ್ಮರಾಯನ ದೇವಸ್ಥಾನ;
10. ಅಣ್ಣಮ್ಮ ದೇವಿ ದೇವಸ್ಥಾನ;
11. ಕೆರೆಗಳು ಮತ್ತು ಕಲ್ಯಾಣಿಗಳು;
12. ಬಂಡಿ ಮಹಾಕಾಳಿ ದೇವಸ್ಥಾನ ಮತ್ತು ವೀರಭದ್ರ ಸ್ವಾಮಿ ದೇವಸ್ಥಾನ ಕೆಂಪಾಂಬುಧಿ.

**ತುಮಕೂರು ಜಿಲ್ಲೆ:**

1. ಕುಣಿಗಲ್ ಕೋಟೆಯ ಅವಶೇಷಗಳು;
2. ದೊಡ್ಡಕೆರೆಯ ಟ್ಯಾಂಕ್ ಬಂಡ್ ರಸ್ತೆಯಲ್ಲಿನ ಕೆಂಪೇಗೌಡ ಮಂಟಪಗಳು;
3. ಸೋಮೇಶ್ವರ ದೇವಸ್ಥಾನ;
4. ಹುಲಿಯೂರು ದುರ್ಗದ ದೇವಸ್ಥಾನ ಮತ್ತು ಕೋಟೆ;
5. ಹುತ್ತರಿದುರ್ಗದ ಕೋಟೆಯ ದೇವಸ್ಥಾನಗಳು;
6. ಕೆರೆಗಳು–ಕಲ್ಯಾಣಿಗಳು, ದಾನಶಾಸನಗಳು; ಮತ್ತು
7. ಹೆಬ್ಬೂರು ದೇವಸ್ಥಾನಗಳು.

**ಚಿಕ್ಕಬಳ್ಳಾಪುರ ಜಿಲ್ಲೆ:**

1. ಆವತಿ ದೇವಸ್ಥಾನಗಳು, ಕಲ್ಯಾಣಿಗಳು ಮತ್ತು ಕೆರೆಗಳು; ಮತ್ತು
2. ನಂದಿ ಬೆಟ್ಟದ ಗೋಪುರಗಳು.

**ಬೆಂಗಳೂರು ಗ್ರಾಮಾಂತರ ಜಿಲ್ಲೆ:**

1. ಗಂಗಾಧರೇಶ್ವರ ದೇವಸ್ಥಾನ, ಶಿವಗಂಗೆ;
2. ಕೆಂಪೇಗೌಡ ಕಂಚಿನ ಪ್ರತಿಮೆ;
3. ಕೆಂಪೇಗೌಡ ಮಂಟಪಗಳು, ಕಲ್ಯಾಣಿಗಳು ಮತ್ತು ಕೆರೆಗಳು;
4. ವೇಣುಗೋಪಾಲಸ್ವಾಮಿ ದೇವಸ್ಥಾನ, ದೇವನಹಳ್ಳಿ; ಮತ್ತು
5. ಕೆಂಪೇಗೌಡ ಪೂರ್ವಜರ ಕೋಟೆ ಮತ್ತು ಕಲ್ಯಾಣಿಗಳು, ದೇವನಹಳ್ಳಿ.

**ರಾಮನಗರ ಜಿಲ್ಲೆ:**

1. ಮಾಗಡಿ ಕೋಟೆ ಮತ್ತು ದೇವಸ್ಥಾನಗಳು;
2. ಸೋಮೇಶ್ವರ ದೇವಸ್ಥಾನ ಮತ್ತು ಅದರ ಮುಂದಿರುವ ದೊಡ್ಡ ಕಲ್ಯಾಣಿ;
3. ತಿರುಮಲೆ ರಂಗನಾಥಸ್ವಾಮಿ ದೇವಸ್ಥಾನ;
4. ಕೆಂಪೇಗೌಡ ವೀರಸಮಾಧಿ, ಕೆಂಪಾಪುರ;

5. ಕೆಂಪಾಪುರದ ಕೆರೆ ಮತ್ತು ಶಾಸನ;
6. ಭೈರವನ ದುರ್ಗ;
7. ಹುಲಿಕಲ್‌ನ ಕಲ್ಯಾಣಿಗಳು, ದೇವಸ್ಥಾನಗಳು ಮತ್ತು ಗೋಪುರಗಳು;
8. ಸಾವನದುರ್ಗದ ಕೋಟೆ ಮತ್ತು ದೇವಸ್ಥಾನಗಳು;
9. ರಾಮಗಿರಿ ದುರ್ಗದ ಕೋಟೆ, ಕಲ್ಯಾಣಿ ಮತ್ತು ದೇವಸ್ಥಾನಗಳು;
10. ರಾಮಗಿರಿ ಬೆಟ್ಟದ ಮಂಟಪಗಳು;
11. ಮಾಗಡಿಯ ಕಲ್ಯಾಣಿಗಳು;
12. ಕಲ್ಯಾ–ಕಲ್ಲೇಶ್ವರ ದೇವಸ್ಥಾನ, ಕಲ್ಯಾಣಿಗಳು ಮತ್ತು ಮಂಟಪ;
13. ಕೆಂಪಸಾಗರ ಕೆರೆ ಶಾಸನ ಮತ್ತು ಗೋಪುರ;
14. ಕಲ್ಯಾಣ ದೇವರ ಮಠ ಮತ್ತು ದೇವಸ್ಥಾನ;
15. ರಂಗನಾಥಸ್ವಾಮಿ ದೇವಸ್ಥಾನ, ದೊಡ್ಡಮುದಿಗೆರೆ;
16. ಶಿವ ಮತ್ತು ಬಸವಣ್ಣ ದೇವಸ್ಥಾನ, ದೊಡ್ಡಮುದಿಗೆರೆ;
17. ಮೋಟಗಾನಹಳ್ಳಿ ಕೆರೆ ಮತ್ತು ಗೋಪುರ;
18. ಅಳಿಲುಕುಪ್ಪೆ ಶಾಸನ;
19. ರಾಮೇಶ್ವರ ದೇವಸ್ಥಾನ, ಹುಲಿಕಲ್; ಮತ್ತು
20. ದಾನಪತ್ರಗಳು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಕೆ. ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳ ಇಲಾಖೆ

**ಅಧಿಸೂಚನೆ**

**ಸಂಖ್ಯೆ: ಕಂಇ 31 ಆರ್‌ಇಹೆಚ್ 2016(ಭಾಗ–3), ಬೆಂಗಳೂರು, ದಿನಾಂಕ: 26.06.2018**

ನಾಡಪ್ರಭು ಕೆಂಪೇಗೌಡ ಪರಂಪರೆ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ: 12) ರ 1ನೇ ಪ್ರಕರಣ (3)ನೇ ಉಪ ಪ್ರಕರಣದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಸದರಿ ಅಧಿನಿಯಮವು ದಿನಾಂಕ: 27.06.2018 ರಿಂದ ಜಾರಿಗೆ ಬರತಕ್ಕದೆಂದು ಗೊತ್ತುಪಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಆರ್.ಎಲ್. ಚಿನ್ನಮ್ಮ**
ಸರ್ಕಾರದ ಅಧೀನ ಕಾರ್ಯದರ್ಶಿ–2,
(ಪುನರ್ವಸತಿ ಮತ್ತು ಪುನರ್‌ನಿರ್ಮಾಣ)
ಕಂದಾಯ ಇಲಾಖೆ.

## 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 55

(2025ರ ಸೆಪ್ಟೆಂಬರ್ ತಿಂಗಳ 10ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025

(2025ರ ಸೆಪ್ಟೆಂಬರ್ ತಿಂಗಳ 10ನೇ ದಿನಾಂಕದಂದು ರಾಜ್ಯ ಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2018ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ 12)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ ಸಂಖ್ಯೆ 12)ರ, 3ನೇ ಪ್ರಕರಣದ, (4)ನೇ ಉಪಪ್ರಕರಣದಲ್ಲಿರುವ, (ಎ) ಖಂಡದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು ".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

**2026 ರ ಕರ್ನಾಟಕ ಅಧಿನಿಯಮ ಸಂಖ್ಯೆ:04**

(2026ರ ಜನವರಿ ತಿಂಗಳ 7ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

# ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ( ಎರಡನೇ ತಿದ್ದುಪಡಿ) ಅಧಿನಿಯಮ, 2025

(2026ರ ಜನವರಿ ತಿಂಗಳ 6ನೇ ದಿನಾಂಕದಂದು ರಾಜ್ಯ ಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ 12)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2018 (2018ರ ಕರ್ನಾಟಕ ಅಧಿನಿಯಮ 12)ರ 3ನೇ ಪ್ರಕರಣದ, (4)ನೇ ಉಪಪ್ರಕರಣದ, (ಜೆ) ಖಂಡದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(ಜೆ-1) ನಿರ್ದೇಶಕರು, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಇಲಾಖೆ- ಪದನಿಮಿತ್ತ ಸದಸ್ಯರು;

(ಜೆ-2) ಮುಖ್ಯ ನಗರ ಯೋಜಕರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ- ಪದನಿಮಿತ್ತ ಸದಸ್ಯರು".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.